ಸಂಪುಟ 01 | ಸಂಚಿಕೆ 56 | ಮಂಗಳವಾರ 06 ಜನವರಿ 2026 | ಪುಟ 4 | ಬೆಲೆ-2 ರೂ.

ಇರ್ಫಾನ್ ಕೆ
ಸಂಪಾದಕರು

M A ವಹಾಬ್
ಪ್ರಧಾನ ಸಂಪಾದಕರು

# ನೈಜ್ಯ ದೆಸೆ

NAIJYA DESE

ಸತ್ಯದ ದಿಕ್ಕು TRUE PATH

ಕನ್ನಡ ದಿನ ಪತ್ರಿಕೆ

ಸಿಂಧನೂರು, ಮಸ್ಕಿ ಮಾನ್ವಿ, ಅಂಗಸೂರು, ರಾಯಚೂರ,ದೇವದುರ್ಗ ಬಳ್ಳಾರಿ, ಕೊಪ್ಪಳ ಯಾದಗಿರಿ, ಕಲಬುರ್ಗಿ, ಬೀದರ, ವಿಜಯಪುರ. ಗದಗ, ವಿಜಯನಗರ. ಏಕಕಾಲಕ್ಕೆ ಪ್ರಕಟಣೆ

REGIONAL KANNADA DAILY MORNING

RNI code: KNKAN/25/A3581 ಮೋ: 9902277588, 9880707587, 9008787586 naijyadese@gmail.com

## ಈ ದಿನದ ವಿಶೇಷ

01) ವಿಶ್ವ ಯುದ್ಧ ಅನಾಥರ ದಿನ

ಪ್ರತಿ ವರ್ಷ ಜನವರಿ 6 ರಂದು, ಯುದ್ಧ ಅನಾಥ-'ರ ದುಃಸ್ಥಿತಿಯ ಬಗ್ಗೆ ಜಾಗೃತಿ ಮೂಡಿಸಲು ಮತ್ತು ಅವರು ಎದುರಿಸುವ ಆಘಾತಕಾರಿ ಪರಿಸ್ಥಿತಿಗಳನ್ನು ಪರಿಹರಿಸಲು ವಿಶ್ವ ಯುದ್ಧ ಅನಾಥರ ದಿನವನ್ನು ಆಚರಿಸಲಾಗುತ್ತದೆ.

2)ಗುರು ಗೋಬಿಂದ್ ಸಿಂಗ್ ಜಯಂತಿ

ಇದನ್ನು ಗುರು ಗೋಬಿಂದ್ ಸಿಂಗ್ ಅವರ ಜನ್ಮ ವಾರ್ಷಿಕೋತ್ಸವವೆಂದು ಆಚರಿಸಲಾಗುತ್ತದೆ ಮತ್ತು ಈ ವರ್ಷ ಅದು ಜನವರಿ 06 ರಂದು ಬರುತ್ತದೆ. ಅವರು ಒಟ್ಟು ಹತ್ತು ಸಿಖ್ ಗುರುಗಳಲ್ಲಿ ಹತ್ತನೇ ಗುರುವಾಗಿದ್ದರು. ಡಿಸೆಂಬರ್ 22, 1666 ರಂದು, ಅವರು ಜೂಲಿಯನ್

## ಸುಭಾಷಿತ

ಕುದಿಯುವವರು ಕುದಿಯಲಿ, ಉರಿಯುವವರು ಉರಿಯಲಿ, ನಿನ್ನ ಪಾಡಿಗೆ ನೀನಿರು. ಕುದಿಯುವವರು ಆವಿಯಾಗುತ್ತಾರೆ, ಉರಿಯುವವರು ಬೂದಿಯಾಗುತ್ತಾರೆ.

ಶ್ರೀ ಸಿದ್ದೇಶ್ವರ ಸ್ವಾಮೀಜಿ

## ಸಾಧನೆ ಯೋಜನೆಯಡಿ ವಿಕಲಚೇತನರ ಇಲಾಖೆಯಿಂದ ಅರ್ಜಿ ಆಹ್ವಾನ

ನೈಜ್ಯ ದೆಸೆ ನ್ಯೂಸ್

ರಾಯಚೂರು: ಜನವರಿ 05 (ಕರ್ನಾಟಕ ವಾರ್ತೆ): 2025-26ನೇ ಸಾಲಿನ ಸಾಧನೆ ಯೋಜನೆಯಡಿ ವಿಕಲಚೇತನರ ಹಾಗೂ ಹಿರಿಯ ನಾಗರೀಕರ ಸಬಲೀಕರಣ ಇಲಾಖೆಯಿಂದ ಅನುಷ್ಠಾನಗೊಳ್ಳುತ್ತಿರುವ ವಿವಿಧ ಯೋಜನೆಗಳಿಗೆ ಸೇವಾ-ಸಿಂಧು ತಂತ್ರಾಂಶದಡಿ (ಪೋರ್ಟಲ್) ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು ಜನವರಿ 31 ಕೊನೆಯ ದಿನ ಆಗಿರುತ್ತದೆ.

ಹೆಚ್ಚಿನ ಮಾಹಿತಿಗಾಗಿ ಆಯಾ ತಾಲ್ಲೂಕಿನ ತಾಲ್ಲೂಕು ಪಂಚಾಯಿತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಗ್ರಾಮೀಣ, ನಗರ ವಿವಿದೋದ್ದೇಶ ಪುನರ್ವಸತಿ (ಎಂ.ಆರ್.ಡಬ್ಲು) ಕಾರ್ಯಕರ್ತರನ್ನು ಅಥವಾ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳ ಕಚೇರಿ, ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರೀಕರ ಸಬಲೀಕರಣ ಇಲಾಖೆ, ರಾಯಚೂರು ಅವರ ದೂರವಾಣಿ ಸಂಖ್ಯೆ:-08532-200992ಗೆ ಕಚೇರಿಯ ಕೆಲಸದ ಸಮಯದಲ್ಲಿ ಸಂಪರ್ಕಿಸಲು ತಿಳಿಸಲಾಗಿದೆ ಎಂದು ಜಿಲ್ಲಾ ಅಂಗವಿಕರ ಕಲ್ಯಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕೊಪ್ಪಳ ಗವಿಮಠದ ಜಾತ್ರೆ :ಭಕ್ತರ ಸಾಗರ

ಕೊಪ್ಪಳ: ಇಲ್ಲಿನ ಗವಿಮಠಕ್ಕೆ ಬರುವ ಎಲ್ಲ ದಿಕ್ಕುಗಳಿಂದಲೂ ಸೋಮವಾರ ಜನ ಪ್ರವಾಹದ ರೀತಿಯಲ್ಲಿ ಬರುತ್ತಿದ್ದರು. ಗೋದೂಳಿಯ ಸಮಯ ಸಮೀಪಿಸುತ್ತಿದ್ದಂತೆಯೇ ಜನ ಮಹಾರಥ-'ೋತ್ಸವಕ್ಕೆ ಸಾಕ್ಷಿಯಾಗಿ ಧನ್ಯತಾ ಭಾವ ಮೆರೆದರು. ಮಠದ ಜಾತ್ರಾ ಮಹೋತ್ಸವ ಕಾರ್ಯಕ್ರಮ ಆರಂಭವಾಗಿ ನಾಲ್ಕು ದಿನಗಳ ಕಳೆದರೂ ವಿಶೇಷ ಆದ್ಯತೆ ಇರುವುದು ಮಹಾರಥೋತ್ಸವದ ದಿನಕ್ಕೆ. ಆದ್ದರಿಂದ ಕಣ್ಣು ಹಾಯಿಸಿದಷ್ಟೂ ದೂರ ಜನಸಾಗರ ಕಂಡುಬಂದಿತು.



ಮೇಘಾಲಯದ ರಾಜ್ಯಪಾಲರಾದ ಮೂಲತಃ ಕೊಪ್ಪಳ ಜಿಲ್ಲೆಯ ಬಿನ್ನಾಳ ಗ್ರಾಮದ ಸಿ.ಎಚ್. ವಿಜಯಶಂಕರ್ ಅವರು ಧ್ವಜ ಹಾ-ರಿಸುವ ಮೂಲಕ ಮಹಾರಥೋತ್ಸವಕ್ಕೆ ಚಾಲನೆ ನೀಡಿದರು. ಆಗ ಭಕ್ತರಲ್ಲಿ ಧನ್ಯತೆಯ ಭಾವ ಕಂಡಿತು. ತಮ್ಮೂರಿನ ಸಾಧಕರಿಗೆ ಗವಿಮಠದ ಮಹಾರಥೋತ್ಸವ ಉದ್ಘಾಟನೆಗೆ ಅವಕಾಶ ಸಿಕ್ಕಿದ್ದಕ್ಕೆ ಜನರಲ್ಲಿ ಸಂಭ್ರಮ ಇಮ್ಮಡಿಗೊಂಡಿತ್ತು. ಮಹಾರಥೋತ್ಸವ ನಡೆದಾಗ ಲಕ್ಷಾಂತರ ಜನ ಭಕ್ತರು ಪಾಲ್ಗೊಂಡು ಭಕ್ತಿ ಸಮರ್ಪಣೆ ಮಾಡಿದರು. ಗವಿಮಠದ ವಿಶಾಲವಾದ ಆವರಣದಿಂದ ಆರಂಭವಾದ ಮಹಾರಥ-'ೋತ್ಸವದ ಯಾತ್ರೆ ಸುರಕ್ಷಿತವಾಗಿ ಪಾದಗಟ್ಟೆ ಮುಟ್ಟಿ ವಾಪಸ್ ಸ್ವ ಸ್ಥಾನಕ್ಕೆ ಬರುತ್ತಿದ್ದಂತೆ ಜನ ಚಪ್ಪಾಳೆ ಹೊಡೆದು ಸಂಭ್ರಮಿಸಿದರು.

ದಕ್ಷಿಣ ಭಾರತದ ಕುಂಭಮೇಳ ಎಂದು ಖ್ಯಾತಿಯಾದ ಗವಿಮಠದ ಜಾತ್ರೆಗೆ ಎಷ್ಟೇ ಲಕ್ಷಾಂತರ ಜನ ಬಂದರೂ ಯಾವುದೇ ಅವಘಡಕ್ಕೆ ಅವಕಾಶವಿಲ್ಲದಂತೆ ಸರಾಗವಾಗಿ, ಸಂಭ್ರಮದಿಂದ ತೇರು ಎಳೆಯಲಾಗುತ್ತದೆ ಎನ್ನುವುದು ವಿಶೇಷ. ಈ ಕಾರ್ಯದಲ್ಲಿ ಎನ್‌ಸಿಸಿ, ಸ್ಕೌಟ್ ಅಂಡ್ ಗೈಡ್ಸ್, ಎನ್-ಎಸ್‌ಎಸ್, ವಿದ್ಯಾರ್ಥಿಗಳ ತಂಡ ಹೀಗೆ ಪ್ರತಿ ಸ್ವಯಂಸೇವಕರು ಜನ ಶಿಸ್ತು ಕಾಪಾಡುವಲ್ಲಿ, ಕಾರ್ಯಕ್ರಮ ಸುಸೂತ್ರವಾಗಿ ನಡೆಯಲು ಪ್ರಮುಖ ಪಾತ್ರ ವಹಿಸಿದರು. ಮಹಾರಥೋತ್ಸವದ ದಿನ ಜನ ಜಿಲ್ಲೆ ಹಾಗೂ ಜಿಲ್ಲೆಯ ಗಡಿ ಭಾಗದ ವಿವಿಧ ಹಳ್ಳಿಗಳಿಂದ ಸೂರ್ಯೋದಕ್ಕೂ ಮೊದಲು ಪಾದಯಾತ್ರೆ ಮೂಲಕ ಬಂದರೆ, ಇನ್ನೂ ಕೆಲವರು ವಾಹನಗಳ ಮೂಲಕ್ಕೆ ಗವಿಮಠಕ್ಕೆ ಬಂದಿದ್ದರು. ಮಹಾರಥ-'ೋತ್ಸವದ ಹಿಂದಿನ ದಿನದಿಂದಲೇ ಬೃಹತ್ ತೇರು ಕಟ್ಟುವ ಕಾರ್ಯ ಮಾಡಲಾಯಿತು. ಲಕ್ಷಾಂತರ ಭಕ್ತರು ಬಂದರೂ ಎಲ್ಲೆಡೆಯೂ ಸ್ವಚ್ಛತೆ ನಿರ್ವಹಣೆ ಮಾಡುವುದು ಗವಿಮಠದ ಜಾತ್ರೆಯ ವಿಶೇಷ. ಎಲ್ಲೇ ಕಸಬಿದ್ದಿರುವುದು ಅಥವಾ ವಾತಾವರಣ ಹೊಲಸು ಮಾಡಿರುವುದು ಕಂಡುಬಂದರೆ ಖುದ್ದು ಅಭಿನವ ಗವಿಸಿದ್ಧೇಶ್ವರ ಸ್ವಾಮೀ-ಜಿಯೇ ಸ್ವಚ್ಛಗೊಳಿಸುತ್ತಾರೆ. ಹೀಗಾಗಿ ಜನ ಸ್ವಯಂಪ್ರೇರಿತರಾಗಿ ಸ್ವಚ್ಛತೆಗೆ ಒತ್ತು ಕೊಡುತ್ತಾರೆ. ಕೊಪ್ಪಳ ಜಿಲ್ಲೆಯಲ್ಲಿ ಚಳಿಯ ವಾತಾವರಣವಿದ್ದು ಹೊರ ರಾಜ್ಯಗಳು ಹಾಗೂ ಜಿಲ್ಲೆಗಳಿಂದ ಬಂದ ಭಕ್ತರಿಗೆ ಮಠದ ವತಿಯಿಂದಲೇ ಪ್ರಸಾದ ಹಾಗೂ ವಸತಿ ವ್ಯವಸ್ಥೆ ಮಾಡಲಾಗಿತ್ತು.

ಜಿಲ್ಲಾಕೇಂದ್ರದಲ್ಲಿರುವ ವಿವಿಧ ಕಲ್ಯಾಣ ಮಂಟಪಗಳು, ಶಾಲಾ ಕಾಲೇಜುಗಳಲ್ಲಿ ವಸತಿ ಸೌಲಭ್ಯ ಕಲ್ಪಿಸಲಾಗಿತ್ತು. ಜಾತ್ರೆಯಲ್ಲಿ ಅಚ್ಚುಕಟ್ಟುತನ, ಸ್ವಚ್ಛತೆ, ಜನರ ಪಾಲ್ಗೊಳ್ಳುವಿಕೆ, ಅಭಿನವ ಗವಿಸಿದ್ಧೇಶ್ವರ ಸ್ವಾಮೀ-ಜಿಯ ಮಾನವೀಯ ಹಾಗೂ ಸಾಮಾಜಿಕ ಕಾರ್ಯಗಳು, ವಿದ್ಯಾರ್ಥಿಗಳಿಗೆ ಅನ್ನ, ಅಕ್ಷರ ಹಾಗೂ ಅಧ್ಯಾತ್ಮದ ಪ್ರೀತಿ ಹಂಚುವಿಕೆಯಿಂದಾಗಿ ಗವಿಮಠದ ಕಾರ್ಯವೈಖರಿ ಎಲ್ಲರ ಮೆಚ್ಚುಗೆ ಗಳಿಸಿದೆ. ಹೀಗಾಗಿ ಕೊಪ್ಪಳ ಎಂದರೆ ಗವಿಮಠ ಎನ್ನುವ ಬ್ರ್ಯಾಂಡ್ ಸೃಷ್ಟಿಯಾಗಿದೆ.

# ಲಂಡನ್‌ನಲ್ಲಿ ಗುರು ಬಸವೇಶ್ವರರ 895ನೇ ಜನ್ಮವಾರ್ಷಿಕೋತ್ಸವ ನಡೆಯಲಿದೆ



ನೈಜ್ಯ ದೆಸೆ ನ್ಯೂಸ್

ಎಪ್ರಿಲ್ 18, 2026ರಂದು ಲಂಡನ್‌ನಲ್ಲಿ ನಡೆಯಲಿರುವ ಗುರು ಬಸವೇಶ್ವರರ 895ನೇ ಜನ್ಮವಾರ್ಷಿಕೋತ್ಸವ ಕಾರ್ಯಕ್ರಮಕ್ಕೆ ಮುಖ್ಯ ಅತಿಥಿಯಾಗಿ ಪಾಲ್ಗೊಳ್ಳುವಂತೆ ಅಧಿಕೃತ ಆಮಂತ್ರಣವನ್ನು ಕರ್ನಾಟಕದ ಗೌರವಾನ್ವಿತ ರಾಜ್ಯಪಾಲರಾದ ತಾವರ್‌ಚಂದ್ ಗೆಹ್ಲೋತ್ ಅವರಿಗೆ ಲ್ಯಾಂಬೆತ್ ಬೊರೋ (ಲಂಡನ್)ನ ಮಾಜಿ ಮೇಯರ್ ಹಾಗೂ ಲ್ಯಾಂಬೆತ್ ಬಸವೇಶ್ವರ ಫೌಂಡೇಶನ್ ಅಧ್ಯಕ್ಷರಾದ ಡಾ। ನೀರಜ್ ಪಾಟೀಲ್ ನೀಡಿದರು.

ಈ ಸಂದರ್ಭದಲ್ಲಿ ಮಾತನಾಡಿದ ರಾಜ್ಯಪಾಲರು, ಬ್ರಿಟಿಷ್ ಸಂಸತ್ ಭವನದ ಎದುರಿನ ಅಲ್ಬರ್ಟ್ ಎಂಬ್ಯಾಂಕ್‌ವೆ?ಂಟ್‌ನಲ್ಲಿ ಬಸವೇಶ್ವರರ ಪ್ರತಿಮೆ ಸ್ಥಾಪಿಸುವಲ್ಲಿ ಲ್ಯಾಂಬೆತ್ ಬಸವೇಶ್ವರ ಫೌಂಡೇಶನ್ ವಹಿಸಿದ ಕಾಳಜಿ ಮತ್ತು ಯಶಸ್ವಿ ಪ್ರಯತ್ನವನ್ನು ಶ್ಲಾ ಸಿದರು. ಕರ್ನಾಟಕದ ಹೊರಗೆ ಇರುವ ಅತ್ಯಂತ ಮಹತ್ವದ ಕರ್ನಾಟಕ ಪ್ರತಿನಿಧಿಕ ಪ್ರತಿಮೆಯಾಗಿ ಇದು ಗುರುತಿಸಿಕೊಂಡಿದ್ದು, ಬ್ರಿಟನ್‌ನಲ್ಲಿ ಭಾರತೀಯ ಪ್ರಧಾನಮಂತ್ರಿ ಅನಾವರಣಗೊಳಿಸಿದ ಮೊದಲ ಪ್ರತಿಮೆ ಎಂಬ ಹೆಗ್ಗಳಿಕೆಗೆ ಪಾತ್ರವಾಗಿದೆ ಎಂದರು.

ಬಸವೇಶ್ವರರು ಪ್ರತಿಪಾದಿಸಿದ ಪ್ರಜಾಸತ್ತಾತ್ಮಕತೆ, ಸಮಾನತೆ ಹಾಗೂ ಸಾಮಾಜಿಕ ನ್ಯಾಯದಂತಹ ವಿಶ್ವಮಾನ್ಯ ಮೌಲ್ಯಗಳನ್ನು ಜಾಗತಿಕ ಮಟ್ಟದಲ್ಲಿ ಪ್ರಚಾರ ಮಾಡುವಲ್ಲಿ ಫೌಂಡೇಶನ್‌ನ ಕಾರ್ಯಗಳನ್ನು ಗೆಹೊತ್ ಪ್ರಶಂಸಿಸಿದರು. ಸಂವಿಧಾನಾತ್ಮಕ ನಿಯಮದಂತೆ ಭಾರತದ ಗೌರವಾನ್ವಿತ ರಾಷ್ಟ್ರಪತಿಗಳ ಅನುಮೋದನೆ ದೊರೆತಲ್ಲಿ, ಲಂಡನ್‌ನಲ್ಲಿ ಗುರು ಬಸವೇಶ್ವರರ ಜನ್ಮವಾರ್ಷಿಕೋತ್ಸವ ಕಾರ್ಯಕ್ರಮದಲ್ಲಿ ಭಾಗವಹಿಸುವುದಾಗಿ ತಿಳಿಸಿದರು.

# ಹಾಲಾಪೂರದಲ್ಲಿ ಅಯ್ಯಪ್ಪ ಸ್ವಾಮಿ ಮಾಲದಾರಿಗಳಿಗೆ ಇಡುಮುರಿ ಕಟ್ಟುವ ಕಾರ್ಯಕ್ರಮ

ನೈಜ್ಯ ದೆಸೆ ನ್ಯೂಸ್

ಮಸ್ಕಿ: ತಾಲೂಕಿನ ಹಾಲಾಪೂರದ ಶ್ರೀ ಬಸವೇಶ್ವರ ದೇವಸ್ಥಾನದಲ್ಲಿ ಅಯ್ಯಪ್ಪ ಸ್ವಾಮಿ ಮಾಲಾಧಾರಿಗಳಿಗೆ ಇಡುಮುರಿ ಕಟ್ಟುವ ಕಾರ್ಯಕ್ರಮ ನಡೆಯಿತು.



ಹಾಲಾಪೂರಿನ 25 ಅಯ್ಯಪ್ಪ ಸ್ವಾಮಿ ಮಾಲದಾರಿಗಳು ಕಳೆದ ನಲವತೆ0ಟು ದಿನಗಳಿಂದಲೂ ರಥ ಮಾಡುವ ಮೂಲಕ ದಿನನಿತ್ಯ ಶಬರಿಮಲೆ ಅಯ್ಯಪ್ಪ ಸ್ವಾಮಿ, ಮಣಿಕಂಠನ ಧ್ಯಾನ ಭಕ್ತಿ ಭಾವ ಮೆರೆಯುವ ಮೂಲಕ ನಿತ್ಯ ಮಡಿ ಸ್ನಾನ ಮಾಡಿ ಪೂಜಾ ಪುನಸ್ಕಾರದೊಂದಿಗೆ ಅಯ್ಯಪ್ಪನ ಸ್ಮರಣೆಯಲ್ಲಿ ಇಂದು 25 ಜನ ಅಯ್ಯಪ್ಪ ಸ್ವಾಮಿ ಮಾಲದಾ-ರಿಗಳಿಗೆ ಶ್ರೀ ಬಸವೇಶ್ವರ ದೇವಸ್ಥಾನದಲ್ಲಿ ಬಳಗಾನೂರು ಗುರುಸ್ವಾಮಿಗಳಿಂದ ಬೆಳಗಿನ ಜಾವದಿಂದ ವಿಶೇಷ ಪೂಜಾ ಅಲಂಕಾರಗಳಿಂದ ಇಡುಮುರಿ ಕಟ್ಟುವ ಭಕ್ತಿ ಭಾವದ ಕಾರ್ಯಕ್ರಮ ಅದ್ದೂರಿಯಾಗಿ ಜರುಗಿ, ಅನೇಕ ಬಂಧು ಬಾಂಧವರು.

ಸ್ನೇಹಿತರಿಂದ ಅಯ್ಯಪ್ಪ ಸ್ವಾಮಿ ಮಾಲದಾರಿಗಳಿಗೆ ಹೂವಿನ ಹಾರ ಅರ್ಪಿಸುವ ಮೂಲಕ ಭಕ್ತಿ ಮೆರೆದರು, ನಂತರ ಬಂದಂತ ಭಕ್ತಾದಿಗಳಿಗೆ ಮಹಾಪ್ರಸಾದ ವ್ಯವಸ್ಥೆ ಮಾಡಲಾಗಿತ್ತು ಸಂಜೆ ಅಯ್ಯಪ್ಪ ಸ್ವಾಮಿ ಮಾಲಾ ದಾರಿಗಳು ಗ್ರಾಮದ ರಸ್ತೆದ್ದಕ್ಕೂ ಅಯ್ಯಪ್ಪ ಸ್ವಾಮಿಯನ್ನು ಧ್ಯಾನಿಸುತ್ತಾ ಪ್ರಮುಖ ಬೀದಿಗಳಲ್ಲಿ ನಡೆದು ಶಬ-ರಿಮಲೆಗೆ ಪ್ರಯಾಣ ಬೆಳೆಸಿದರು.

# ಎ.ಪಿ.ಎಂ.ಸಿ, ಹಮಾಲರಿಗೆ ಕೂಡಲೇ ನಿವೇಶನ ಹಂಚಿಕೆ ಮಾಡಿ: ರಮೇಶನಾಯಕ

ನೈಜ್ಯ ದೆಸೆ ನ್ಯೂಸ್

ಮಾನ್ವಿ: ಪಟ್ಟಣದ ಪತ್ರಿಕಾ ಭವನದಲ್ಲಿ ಕರ್ನಾಟಕ ರಾಷ್ಟ್ರ ಸಮಿತಿ ಪಕ್ಷದ ತಾ.ಅಧ್ಯಕ್ಷರಾದ ರಮೇಶನಾಯಕ ಮಾತನಾಡಿ ಪಟ್ಟಣದ ಪಟ್ಟಣದ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಯ ಆವರಣದಲ್ಲಿ ಕಳೆದ ಹಲವು ವರ್ಷಗಳಿಂದ ಹಮಾಲಿ ಕಾರ್ಮಿಕರಾಗಿ ಸೇವೆ ಸಲ್ಲಿಸುತ್ತಿರುವ ಶ್ರೀ ಉದ್ಭವ ಆಂಜನೇಯ್ಯ ಎ.ಪಿ.ಎಂ.ಸಿ, ಹಮಾಲರ ಸಂಘ ಮಾನ್ವಿಯ ಹಮಾಲಿ ಕಾರ್ಮಿಕರಿಗಾಗಿ 2004-05 ನೇ ಸಾಲಿನಲ್ಲಿ ಮುಸ್ಟೂರು ರಸ್ತೆಯಲ್ಲಿ ಕಾಯ್ದಿ-ರಿಸಿದ 2 ಎಕರೆ 25 ಗುಂಟೆ ಜಮೀನಿನಲ್ಲಿ 120 ನಿವೇಶನಗಳನ್ನು ರಚಿಸಿದರು.





ಕೂಡ ಎ.ಪಿ.ಎಂ.ಸಿ, ಹಮಾಲರಿಗೆ ಹಕ್ಕು ಪತ್ರ ನೀಡುವಲ್ಲಿ ಕಾರಣಾಂತರಗಳಿಂದ ವಿಳಾಂಬವಾಗುತ್ತಿರುವ ಕುರಿತು ಬೆಂಗಳೂ-ರಿನ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಯ ಉನ್ನತ ಅಧಿಕಾರಿಗಳ ಗಮನಕ್ಕೆ ತಂದನಂತರ ನ.20 ರಂದು ವಿವಿಧ ನಿಭಂದನೆ ಷರತ್ತುಗಳಿಗೆ ಒಳಪಟ್ಟು ನಿಯಮಾನುಸಾರ ಪರಿಶೀಲಿಸಿ 73 ನಿವೇಶನಗಳನ್ನು ಹಮಾಲರಿಗೆ ಹಂಚಿಕೆ ಮಾಡುವುದಕ್ಕೆ ಅದೇಶ ನೀಡಿ ಎರಡು ತಿಂಗಳು ಕಳೆದರು ಕೂಡ ಇದುವರೆಗೆ ಎ.ಪಿ.ಎಂ.ಸಿ. ಕಾರ್ಯದರ್ಶಿಗಳು ನಿವೇಶನದ ಹಕ್ಕು ಪತ್ರಗಳನ್ನು ವಿತರಿಸುವುದಕ್ಕೆ ಮುಂದಾಗದೆ.

ಇರುವುದರಿಂದ ಮುಂದಿನ ತಿಂಗಳು ರಾಯಚೂ-ರಿಗೆ ಆಗಮಿಸಲಿರುವ ರಾಜ್ಯದ ಮುಖ್ಯ ಮಂತ್ರಿಗಳಿಗೆ ಹಮಾಲರಿಗೆ ಹಕ್ಕು ಪತ್ರ ನೀಡುವಂತೆ ಮನವಿ ಸಲ್ಲಿಸಿ ಪ್ರತಿಭಟನೆ ಹಮ್ಮಿಕೊಳ್ಳಲಾಗುವುದು ಎಂದು ತಿಳಿಸಿದರು. ಕೆ.ಆರ್.ಎಸ್.ರಾಜ್ಯ ಎಸ್.ಸಿ.ಎಸ್.ಟಿ. ಘಟಕದ ರಾಜ್ಯ ಕಾರ್ಯದರ್ಶಿ ಬಸವಪ್ರಭು ಮೇದಾ, ಪ್ರಧಾನ ಕಾರ್ಯದರ್ಶಿ ಪಂಪಾತಿ ಹಡಪದ ಇದ್ದರು.

# ಪರಿಸರ ರಕ್ಷಣೆಗೆ 5 ಕೋಟಿ ಸಸಿ ನೆಡುವ ಯೋಜನೆ: ಸಿಎಂ ಸಿದ್ದರಾಮಯ್ಯ

ನೈಜ್ಯ ದೆಸೆ ನ್ಯೂಸ್

ನವದೆಹಲಿ: ಪರಿಸರವನ್ನು ನಾವು ರಕ್ಷಿಸಿದರೆ ಅದು ನಮ್ಮನ್ನು ರಕ್ಷಿಸುತ್ತದೆ. ಅದಕ್ಕಾಗಿ ಪರಿಸರದ ಬಗ್ಗೆ ಜ್ಞಾನ ಅಗತ್ಯ. ಈ ಕುರಿತು ಸರ್ಕಾರ ಅನೇಕ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದೆ. ಪ್ರತಿವರ್ಷ 3-5 ಕೋಟಿ ಸಸಿ ನೆಡುವ ಯೋಜನೆಯನ್ನು ಹಮ್ಮಿಕೊಳ್ಳಲಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಭಾನುವಾರ ಹೇಳಿದರು.

ಭಾನುವಾರ ಕರ್ನಾಟಕ ಚಿತ್ರಕಲಾ ಪರಿಷತ್ತು ವತಿಯಿಂದ ವಗರದ ಕುಮಾರ ಕೃಪಾ ರಸ್ತೆಯಲ್ಲಿರುವ ಕರ್ನಾಟಕ ಚಿತ್ರಕಲಾ ಪರಿಷತ್ತು ಆವರಣದಲ್ಲಿ ಆಯೋಜಿಸಲಾಗಿದ್ದ 23ನೇ ಚಿತ್ರಸಂತೆ ಕಾರ್ಯಕ್ರಮ ಉದ್ಘಾಟಿಸಿ ಮುಖ್ಯಮಂತ್ರಿಗಳು ಮಾತನಾಡಿದರು.



ಮುಖ್ಯಮಂತ್ರಿಯಾಗಿ 8ನೇ ಬಾರಿಗೆ ಚಿತ್ರ ಸಂತೆಯಲ್ಲಿ ಭಾಗವಹಿಸುತ್ತಿದ್ದೇನೆ ಎನ್ನುವುದು ಖುಷಿಯ ವಿಚಾರ. ಕಲಾವಿದರನ್ನು ಪ್ರೋತ್ಸಾಹಿಸುವುದು, ಅವರ ಚಿತ್ರಗಳ ಪ್ರದರ್ಶನ ಹಾಗೂ ಅವುಗಳ ಮಾರಾಟಕ್ಕೆ ವೇದಿಕೆ ಸೃಷ್ಟಿ ಮಾಡುವ ಕೆಲಸವನ್ನು ಚಿತ್ರಕಲಾ ಪರಿಷತ್ತು ಅರವತ್ತು ವರ್ಷಗಳಿಂದ ಮಾಡುತ್ತಾ ಬಂದಿದೆ. ಚಿತ್ರಸಂತೆ ತನ್ನ 23ನೇ ವರ್ಷಕ್ಕೆ ಕಾಲಿಟ್ಟಿದೆ. ಸುಮಾರು 22 ರಾಜ್ಯಗಳು, ನಾಲ್ಕು ಕೇಂದ್ರಾಡಳಿತ ಪ್ರದೇಶಗಳ ಕಲಾವಿದರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದಾರೆ.

ಪ್ರತಿ ಜಿಲ್ಲೆಯಲ್ಲಿಯೂ ಸಾಧಕರ ವಸ್ತುಸಂಗ್ರಹಾಲಯಕ್ಕೆ ಬೇಡಿಕೆಯಿದ್ದು, ಸರ್ಕಾರ ಅದನ್ನು ಸಕಾರಾತ್ಮಕವಾಗಿ ಸ್ವೀಕಾರ ಮಾಡಲಿದೆ. ಈ ಬಾರಿಯ ಚಿತ್ರಸಂತೆಯ ಧ್ಯೇಯ ವಾಕ್ಯ ಪರಿಸರಕ್ಕೆ ಸಮರ್ಪಿಸಲಾಗಿದೆ. ಪರಿಸರವನ್ನು ನಾವು ರಕ್ಷಿಸಿದರೆ ಅದು ನಮ್ಮನ್ನು ರಕ್ಷಿಸುತ್ತದೆ. ಅದಕ್ಕಾಗಿ ಪರಿಸರದ ಬಗ್ಗೆ ಜ್ಞಾನ ಅಗತ್ಯ. ಈ ಕುರಿತು ಸರ್ಕಾರ ಅನೇಕ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದೆ. ಬೆಂಗಳೂರು ಸೇ-ರಿದಂತೆ ದೇಶದ ಅನೇಕ ರಾಜಧಾನಿಗಳಲ್ಲಿ ಪರಿಸರ ಮಾಲಿನ್ಯ ಹೆಚ್ಚಾಗಿದ್ದು, ದೆಹಲಿಯಲ್ಲಿ ಬದುಕಲು ಸಾಧ್ಯವಿಲ್ಲದ ವಾತಾವರಣ ನಿರ್ಮಾಣವಾಗುತ್ತಿದೆ. ಪರಿಸರದ ರಕ್ಷಣೆ ಇಂದಿನ ಅಗತ್ಯವಾಗಿದೆ ಎಂದು ಹೇಳಿದರು.

ಪ್ರತಿ ವರ್ಷ ಮೂರರಿಂದ ಐದು ಕೋಟಿ ಸಸಿಗಳನ್ನು ನೆಡುವ ಕಾರ್ಯಕ್ರಮವನ್ನು ಸರ್ಕಾರದ ವತಿಯಿಂದ ಹಮ್ಮಿಕೊಳ್ಳಲಾಗಿದೆ. ಯಾವುದೇ ಪ್ರದೇಶದಲ್ಲಿ ಶೇ. 30ರಷ್ಟು ಕಾಡು ಇರಬೇಕು. ನಮ್ಮಲ್ಲಿ ಶೇಕಡ 20ರಷ್ಟು ಅರಣ್ಯ ಪ್ರದೇಶವಿದೆ. ಇದನ್ನು ಹೆಚ್ಚು ಮಾಡಲು ಪ್ರಾಮಾಣಿಕ ಪ್ರಯತ್ನವನ್ನು ಮಾಡಲಾಗುವುದು.

ಸಾಲು ಮರದ ತಿಮ್ಮಕ್ಕನವರಂತೆ ಸಾರ್ವಜನಿಕರು ಗಿಡಗಳನ್ನು ನೆಡಬೇಕು. ಮಕ್ಕಳನ್ನು ಸಾಕಿದಂತೆ ಗಿಡಮರಗಳನ್ನು ಅವರು ಸಾಕಿದ್ದ ಕಾರಣ ಹಲವು ಪ್ರಶಸ್ತಿಗಳು ದೊರೆಯಿತು. ಅವರ ಆತ್ಮಕ್ಕೆ ಶಾಂತಿ ದೊರಕಬೇಕಾದರೆ ನಾವೆಲ್ಲರೂ ಗಿಡ ಬೆಳೆಸುವ ಪ್ರಯತ್ನವನ್ನು ಮಾಡಬೇಕು.

ಪರಿಸರ ರಕ್ಷಣೆಗಾಗಿ ಹೋರಾಟವನ್ನೇ ಕೈಗೊಂಡ ಅನೇಕರು ನಮ್ಮ ನಡುವೆಯೇ ಇದ್ದಾರೆ. ಗಿಡ ನೆಡಲು ಬಹಳ ಖರ್ಚು ಆಗುವುದಿಲ್ಲ. ಮನಸ್ಸು ಮಾಡಬೇಕಷ್ಟೆ. ಸರ್ಕಾರ ಕೂಡ ಈ ದಿಕ್ಕಿನಲ್ಲಿ ಹೆಚ್ಚಿನ

## ಸಾಹಿತ್ಯ ಸಿಂಚನ

ಅಭಿಲಾಷೆ.!

ನಾ ಲೋಭಿಯಲ್ಲ ಗೆಳತಿ
ಕೊಂಚವು ಜಿಪುಣತನವಿಲ್ಲದ್ದು..
ಈ ನನ್ನಯ ಪ್ರೀತಿ.!

ಆ ಕಡಲಾಳದ ಮುತ್ತುಗಳ
ಹೆಕ್ಕಿತಂದು ಮಾಲೆಮಾಡಿ
ತರುವೆನೆಂದು ತಿಳಿಸಲಾರೆ.!

ಬಾನಿನ ತಿಂಗಳ ಚಂದ್ರನ
ಹೊತ್ತುತಂದು ಪದಕಮಾಡಿ
ತೊಡಿಸುವೆನೆಂದು ಹೇಳಲಾರೆ.!

ಸಿರಿ ಬಂಗಾರದ ಪಂಜರದಿ
ಇಟ್ಟು ಕಾಯುವೆನೆಂದು
ಎಂದಿಗೂ ನುಡಿಯಲಾರೆ.!

ನಿತ್ಯ ಒಲವ ಉದ್ಯಾನವನದಿ
ನಿನ್ನೊಡನೆ ಸದಾ ಸ್ವಚ್ಛಂದದಿ
ಹಾರುತ್ತಾ ನಲಿ ನಲಿಯುವಾಸೆ.!

ನನ್ನ ಒಡಲಾಳದ ಪ್ರೇಮದ
ಸ್ವಾತಿ ಮುತ್ತುಗಳ ಪೋಣಿಸಿ
ನಿನಗೆ ಹಾರವಾಗಿಸುವ ಆಸೆ.!

ನನ್ನಯ ಈ ಹೃದಯವನೆ
ಹೊಳೆವ ಪದಕವಾಗಿ ಮಾಡಿ
ನಿನ್ನೆದೆಗೆ ತೊಡಿಸುವಾಸೆ.!

ಕನಕಾಭಿಷೇಕ ಮಾಡುವೆನು
ಕಲ್ಪನಾಲೋಕ ಸೃಷ್ಟಿಸುವೆನು
ಎಂದು ನೀಡಲಾರೆ ಭರವಸೆ.!

ಕಂಬನಿಯೆಂದು ಹನಿಯದಂತೆ
ರೆಪ್ಪೇಲಿ ಕುಳಿತು ಕಾಯುವೆನು
ಓ ನನ್ನೊಲವಿನ ಹೂಮನಸೆ.!

ನೆರಳಾಗಿ ಅನವರತ ನಿನ್ನೊಡನೆ
ಕ್ಷಣ ಕ್ಷಣವೂ ಕಾಪಿಡುವೆನು
ಎಂದೆಂದು ಬತ್ತದಂತೆ ಪ್ರೇಮಪಸೆ.!

ಎ.ಎನ್.ರಮೇಶ್.ಗುಬ್ಬಿ.

# ಪಾರದರ್ಶಕತೆಗಾಗಿ ಅಬಕಾರಿ ಸನ್ನದುಗಳ ಇ-ಹರಾಜು ತರಬೇತಿ: ಅಪರ ಜಿಲ್ಲಾಧಿಕಾರಿ ಶಿವಾನಂದ

ನೈಜ್ಯ ದೆಸೆ ನ್ಯೂಸ್

**ರಾಯಚೂರು: ಜನವರಿ 05 (ಕರ್ನಾಟಕ ವಾರ್ತೆ): ಅಬಕಾರಿ ಸನ್ನದುಗಳ ಇ-ಹರಾಜು ಪ್ರಕ್ರಿಯೆ ಕುರಿತು ಸಾರ್ವಜನಿಕರಿಗೆ ಮತ್ತು ಸನ್ನದುದಾರರಿಗೆ ತರಬೇತಿ ಕಾರ್ಯಕ್ರಮವು ಜನವರಿ 5ರಂದು ನಡೆಯಿತು.**

ನಗರದ ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದ ಶ್ರೀ ಬಸವೇಶ್ವರ ಆಡಿಟೋರಿಯಂ ಹಾಲನಲ್ಲಿ ಅಬಕಾರಿ ಇಲಾಖೆಯಿಂದ ನಡೆದ ತರಬೇತಿಯನ್ನು ಅಪರ ಜಿಲ್ಲಾಧಿಕಾರಿಗಳಾದ ಶಿವಾನಂದ ಅವರು ಉದ್ಘಾಟಿಸಿದರು. ಈ ವೇಳೆ ಮಾತನಾಡಿದ ಅಪರ ಜಿಲ್ಲಾಧಿಕಾರಿಗಳು, ಅಬಕಾರಿ ಇಲಾಖೆಯ ಮಹಾತ್ವಾಕಾಂಕ್ಷೆಯ ಕಾರ್ಯಕ್ರಮವಾದ ಮತ್ತು ರಾಜ್ಯದಲ್ಲಿ ಸ್ಥಗಿತಗೊಂಡಿರುವ ಒಟ್ಟು 477 ಸಿಎಲ್-2ಎ ಮತ್ತು 92 ಸಿಎಲ್-9ಎ ಸನ್ನದುಗಳನ್ನು ಘನ ಸರ್ಕಾರವು ಈ ಹರಾಜು ಮೂಲಕ ವಿಲೇವಾರಿ ಮಾಡಲು ಉದ್ದೇಶಿಸಿ ಅಧಿಸೂಚನೆ ಹೊರಡಿಸಿದೆ. ಈ ಸಂಬಂಧ ಇಂತಿಷ್ಟು



ಎಂದು ಸನ್ನದುಗಳ ಹಂಚಿಕೆ ಮಾಡಲಾಗಿದೆ.

ಈ ಸನ್ನದುಗಳನ್ನು ಹೇಗೆ ಯಾವ ರೀತಿಯಲ್ಲಿ ಈ ಹರಾಜು ಪ್ರಕ್ರಿಯೆ ಮೂಲಕ ವಿಲೇವಾರಿ ಮಾಡಲಾಗುತ್ತದೆ ಎಂಬುದರ ಬಗ್ಗೆ ತಿಳಿಸಲು ಮತ್ತು ಪಾರದರ್ಶಕತೆ ಕಾಯ್ದುಕೊಳ್ಳಲು ರಾಯಚೂರು ಹಾಗೂ ಕೊಪ್ಪಳ ಅಬಕಾರಿ ಉಪ ಆಯುಕ್ತರ ಕಚೇರಿಯಿಂದ ಹಮ್ಮಿಕೊಂಡ ಈ ತರಬೇತಿ ಮಹತ್ವದ್ದಾಗಿದ್ದು, ಸಾರ್ವಜನಿಕರು ಮತ್ತು ಸನ್ನದುದಾರರು ಇದರ ಸದುಪಯೋಗ ಪಡೆಯಬೇಕು ಎಂದು ಸಲಹೆ ಮಾಡಿದರು. ಈ ವೇಳೆ ಕೊಪ್ಪಳ ಜಿಲ್ಲೆಯ ಅಬಕಾರಿ ಉಪ ಆಯುಕ್ತರಾದ ಕೆ. ಪ್ರಶಾಂತಕುಮಾರ ಅವರು ಪ್ರಾಸ್ತಾವಿಕ ಮಾತನಾಡಿ, ರಾಯಚೂರು ಜಿಲ್ಲೆಗೆ ಒಟ್ಟು 08 ಸಿಎಲ್-2ಎ ಮತ್ತು 1 ಸಿಎಲ್-9ಎ ಸನ್ನದುಗಳ ಹಂಚಿಕೆ ಮಾಡಲಾಗಿದೆ.

ಕೇಂದ್ರ ಸರ್ಕಾರದ ಸಂಸ್ಥೆಯಾದ ಎಂ-ಎಸ್‌ಟಿಸಿ ಸಂಸ್ಥೆಯ ತಂತ್ರಜ್ಞರಿಂದ ಇ-ಹರಾಜು ಪ್ರಕ್ರಿಯೆ ಬಗ್ಗೆ ತಿಳಿಸಲು ಕ್ರಮ ವಹಿಸಲಾಗಿದೆ ಎಂದು ಮಾಹಿತಿ ನೀಡಿದರು. ಇ-ಹರಾಜು ಪ್ರಕ್ರಿಯೆ, ತಿದ್ದುಪಡಿಯಾದ ಕಾನೂನುಗಳು ಸೇರಿದಂತೆ ನಾನಾ ವಿಷಯಗಳ ಬಗ್ಗೆ ತಿಳಿಸಿದರು. ಸಂಪನ್ಮೂಲ ವ್ಯಕ್ತಿಗಳಾದ ಸತೀಶಕುಮಾರ ಅವರು ಮಾತನಾಡಿ, ಇ-ಹರಾಜು ಪ್ರಕ್ರಿಯೆಗೆ ಸಂಬಂಧಿಸಿದ ವೆಬ್ ಪೋರ್ಟಲ್ ಮಾಹಿತಿ ಹಾಗೂ ಇ-ಹರಾಜು ಪ್ರಕ್ರಿಯೆಯಲ್ಲಿನ ಪಾರದರ್ಶಕತೆಯ ಅಂಶಗಳ ಬಗ್ಗೆ ಮಾಹಿತಿ ನೀಡಿದರು. ತರಬೇತಿಯಲ್ಲಿ ರಾಯಚೂರು ಜಿಲ್ಲೆಯ ಅಬಕಾರಿ ಉಪ ಆಯುಕ್ತರಾದ ಸಿ.ಕೆ.ಮಹೇಂದ್ರ, ಸಹಾಯಕ ಉಪ ಆಯುಕ್ತರಾದ ಕೆ ರವಿ ಸೇರಿದಂತೆ, ಅಬಕಾರಿ ಇಲಾಖೆಯ ರಾಯಚೂರು ಮತ್ತು ಕೊಪ್ಪಳ ಜಿಲ್ಲೆಯ ಇನ್ನಿತರ ಅಧಿಕಾರಿಗಳು ಮತ್ತು ಸಿಬ್ಬಂದಿ ಹಾಗೂ ಸಾರ್ವಜನಿಕರು ಇದ್ದರು.

# ಇಂದು ತೋರಣದಿನ್ನಿಯಲ್ಲಿ ನಮ್ಮ ತುಂಗಭದ್ರಾ ಸೌಹಾರ್ದ ಸಹಕಾರಿ ಸಂಘ ಪ್ರಾರಂಭೋತ್ಸವ



ನೈಜ್ಯ ದೆಸೆ ನ್ಯೂಸ್

**ಮಸ್ಕಿ: ತಾಲೂಕಿನ ತೋರಣದಿನ್ನಿಯಲ್ಲಿ ನೂತನವಾಗಿ ನಮ್ಮ ತುಂಗಭದ್ರಾ ಸೌಹಾರ್ದ ಸಹಕಾರಿ ಸಂಘ ಪ್ರಾರಂಭೋತ್ಸವದ ಸಾನಿಧ್ಯವನ್ನು ಮಸ್ಕಿ ಗಚ್ಚಿನ ಮಠದ ಪೂಜ್ಯ ಶ್ರೀ ವರರುದ್ರಮನಿ ಶಿವಾಚಾರ್ಯರು, ಜಂಗಮರಳ್ಳಿ ಪೂಜ್ಯ ಶ್ರೀ ದಂಡಗುಂಡಪ್ಪ ತಾತ ಸಾನಿಧ್ಯ ವಹಿಸಿದ್ದರು.**

ಮುಖ್ಯ ಅತಿಥಿಗಳಾಗಿ ಶಾಸಕರಾದ ಆರ್ ಬಸನಗೌಡ ತುರವಿಹಾಳ ಹಾಗೂ ಮಾಜಿ ಶಾಸಕ ಪ್ರತಾಪ್ ಗೌಡ ಪಾಟೀಲ್, ನೂತನವಾಗಿ ಪ್ರಾರಂಭವಾದ ನಮ್ಮ ತುಂಗಭದ್ರಾ ಸಹಕಾರಿ ಕುರಿತು ಅಭಿನಂದನೆ ಶುಭಾಶಯಗಳನ್ನು ತಿಳಿಸಿ ಮಾತನಾಡಿದರು. ಈ ಸಂದರ್ಭದಲ್ಲಿ ಮಲ್ಲಿಕಾರ್ಜುನ ಪಾಟೀಲ ಯದ್ದಲದಿನ್ನಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರು ಮಸ್ಕಿ, ಶರಣಯ್ಯ ಸ್ವಾಮಿ ಸೂಪ್ಪಿಮಠ ಬಿಜೆಪಿ ಮಂಡಲ ಅಧ್ಯಕ್ಷರು ಹಾಗೂ ನಮ್ಮ ತುಂಗಭದ್ರಾ ಸಹಕಾರಿಯ ಅಧ್ಯಕ್ಷರಾದ ಎರಿತಾತ ಮಾಲಿ ಪಾಟೀಲ್ ಜಂಗಮರಹಳ್ಳಿ, ಉಪಾಧ್ಯಕ್ಷರಾಗಿ ಶೋಭಾ ದುರ್ಗಪ್ರಸಾದ್ ತೋರಣದಿನ್ನಿ, ನಿರ್ದೇಶಕರಾಗಿ ಸೂಗರೆಡ್ಡಿ ಶಾವಂತಗೇರಿ ತೋರಣದಿನ್ನಿ,

ಅಯ್ಯನಗೌಡ ಸಾಹುಕಾರ್, ಪ್ರವೀಣ್ ಕುಮಾರ ಮೂಲಿಮನಿ, ಶಂಕರಲಿಂಗ ಜಂಗಮರಳ್ಳಿ, ಯಂಕಪ್ಪ ಜವಳಗೇರಾ ತೋರಣದಿನ್ನಿ, ಬಸವರಾಜ್ ಪ್ರಿನ್ಸಿಪಾಲ್, ಶಾಂತಮ್ಮ ಗುಂಡಸಾಗರ, ರೇಣುಕಾ ಬಸವರಾಜ ಜಂಗಮರಳ್ಳಿ, ದುರಗಯ ಮಲ್ಕಾಪುರ್, ರೇಣುಕಾ ಮಹದೇವಪ್ಪ ಮರಕಮದಿನ್ನಿ, ಪವಿತ್ರ ಪಾಟೀಲ್, ಎಂ ಶ್ರೀನಿವಾಸ್ ಜೋಳದರಾಶಿ ಕ್ಯಾಂಪ್, ದುರ್ಗಪ್ಪ

ತೋರಣದಿನ್ನಿ ಮತ್ತು ಸಿಬ್ಬಂದಿಗಳಾದ ಹನುಮೇಶ್ ಬಳಗನೂರ, ಚಂದ್ರಶೇಖರ ಹಾಗೂ ಅನೇಕ ಮುಖಂಡರು, ಷೇರುದಾರರು ಭಾಗವಹಿಸಿದ್ದರು.

# ವಿದ್ಯಾರ್ಥಿಗಳೊಂದಿಗೆ ಶಾಸಕರ ಸಂವಾದ ಮತ್ತು ನೂತನ ಬಸ್ ಗಳಿಗೆ ಚಾಲನೆ

ನೈಜ್ಯ ದೆಸೆ ನ್ಯೂಸ್

**ವಿದ್ಯಾರ್ಥಿಗಳ ಪ್ರಯಾಣದ ಅನಾನುಕೂಲತೆ ಮನಗಂಡು ಸಿಂಧನೂರು ಶಾಸಕ ಹಂಪನಗೌಡ ಬಾದರ್ಲಿಯವರು ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಯ ಶಾಸಕರ ಅನುದಾನದಡಿಯಲ್ಲಿ ಶಾಲಾ ಕಾಲೇಜುಗಳ ವಿದ್ಯಾರ್ಥಿಗಳಿಗೆ ಕೆಕೆಆರ್‌ಟಿಸಿ ನಿಗಮದ ವಿದ್ಯಾರ್ಥಿ ರಥ ವಿಶೇಷ 14 ಬಸ್ ಗಳನ್ನು ಖರಿದೀಸಿ, ಅದನ್ನು ವಿದ್ಯಾರ್ಥಿಗಳ ಪ್ರಯಾಣಕ್ಕಾಗಿ ಮೀಸಲಿಟ್ಟಿದ್ದು, ಜ.5 ಸೋಮವಾರದಂದು ಶಾಸಕರು ಬಸ್ ಗಳಿಗೆ ಚಾಲನೆ ನೀಡುವ ಮೂಲಕ ವಿದ್ಯಾರ್ಥಿಗಳೊದಿಗೆ ಸಂವಾದ ನಡೆಸಿದರು.**

ನಗರದ ಬಸ್ ನಿಲ್ದಾಣದಲ್ಲಿ ಏರ್ಪಡಿಸಿದ್ದ ವಿದ್ಯಾರ್ಥಿ ರಥಕ್ಕೆ ಚಾಲನೆ ಹಾಗೂ ವಿದ್ಯಾರ್ಥಿಗಳೊಂದಿಗೆ ಸಂವಾದ ಕಾರ್ಯಕ್ರಮದಲ್ಲಿ ಭಾಗವಹಿಸಿ ನೂತನ



ಬಸ್ ಗಳಿಗೆ ಚಾಲನೆ ನೀಡಿ ಮಾತನಾಡಿದ ಅವರು, ವಿದ್ಯಾರ್ಥಿಗಳು ನಿಮ್ಮ ಭವಿಷ್ಯವನ್ನು ನೀವೇ ರೂಪಿಸಿಕೊಳ್ಳಬೇಕು. ರಾಜ್ಯ ಸರ್ಕಾರ ಕೆಕೆಆರ್.ಡಿ.ಬಿ. ಅಡಿಯಲ್ಲಿ ಬಸ್ ಗಳ ವಯವಸ್ಥೆ ಮಾಡಿದ್ದು, ಈ ಸೌಲಭವನ್ನು ವಿದ್ಯಾರ್ಥಿಗಳು ಸದೂಪಯೋಗ ಪಡಿಸಿಕೊಂಡು 100 ಪ್ರತಿಶತ ಶಾಲಾ ಕಾಲೇಜಗಳಿಗೆ ಹಾಜರಾಗಬೇಕು.

ನನಗೆ ಗೊತ್ತಿರುವಂತೆ ವಿದ್ಯಾರ್ಥಿಗಳ ಹಾಜುರಾತಿ ಎಲ್ಲಾ ಕಾಲೇಜುಗಳಲ್ಲಿ ಕಡಿಮೆ ಇದೆ. ಕೇಳಿದರೆ ಬಸ್ ಇಲ್ಲ ಇದ್ದರೂ ಸಮಯಕ್ಕೆ ಸರಿಯಾಗಿ ಬಸ್ ಬರುತ್ತಿಲ್ಲ. ಎನ್ನುತ್ತಿದ್ದೀರಿ, ಈಗ ನಿಮಗಾಗಿ ಬಸ್ ವ್ಯವಸ್ಥೆ ಮಾಡಿದ್ದು, ಈಗಲಾದರೂ ನೀವು ಸರಿಯಾಗಿ ಶಾಲಾ ಕಾಲೇಜಗಳಿಗೆ ಹಾಜುರಾಗಿ, ಉನ್ನತ ಶ್ರೇಣಿಯಲ್ಲಿ ಉತ್ತೀರ್ಣರಾಗಿ, ಉನ್ನತ ಹುದ್ದೆ ಪಡೆದು ಸಿಂಧನೂರು ತಾಲೂಕಿಗೆ ಹೆಸರು ತರಬೇಕು ಎಂದರು. ಈ ಸಂದರ್ಭದಲ್ಲಿ: ಎಂಎಲ್ಸಿ ಬಸನಗೌಡ ಬಾದರ್ಲಿ, ಸುಡಾ ಅಧ್ಯಕ್ಷ ಬಾಬುಗೌಡ ಬಾದರ್ಲಿ, ತಹಶೀಲ್ದಾರ್ ಅರುಣ್ ಕುಮಾರ್ ದೇಸಾಯಿ, ಇಓ ಚಂದ್ರಶೇಖರ್, ಹಾಗೂ ಖಾಸಗಿ ಕಾಲೇಜುಗಳ ಆಡಳಿತ ಮಂಡಳಿಯ ಸದಸ್ಯರು ಇದ್ದರು.

# ಚಬನೂರ ಕಾರ್ಯಕ್ರಮಕ್ಕೆ ಸಚಿವ ಶಿವಾನಂದ ಪಾಟೀಲಗೆ ಆಹ್ವಾನ



ನೈಜ್ಯ ದೆಸೆ ನ್ಯೂಸ್

**ತಾಳಿಕೋಟಿ: ತಾಲೂಕಿನ ಚಬನೂರ ಗ್ರಾಮದಲ್ಲಿ ನೂತನವಾಗಿ ನಿರ್ಮಾಣಗೊಂಡಿರುವ ಶ್ರೀ ರಾಮಲಿಂಗೇಶ್ವರ ಮಠ ಹಾಗೂ ಸಭಾಭವನದ ಉದ್ಘಾಟನಾ ಕಾರ್ಯಕ್ರಮಕ್ಕೆ ಕರ್ನಾಟಕ ಸರ್ಕಾರದ ಜವಳಿ, ಕಬ್ಬು ಅಭಿವೃದ್ಧಿ ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವ ಶಿವಾನಂದ ಪಾಟೀಲ ಇವರಿಗೆ ಆಮಂತ್ರಣ ನೀಡಲಾಯಿತು.**

ಸೋಮವಾರ ಪರಮಪೂಜ್ಯರ ನೇತೃತ್ವದಲ್ಲಿ ವಿಜಯಪುರ ನಗರದಲ್ಲಿರುವ ಸಚಿವ ಶಿವಾನಂದ ಪಾಟೀಲ ಇವರ ಗೃಹಕ್ಕೆ ತೆರಳಿದ ನಿಯೋಗವು ನೂತನ ಮಠ ಹಾಗೂ ಸಭಾಭವನದ ಉದ್ಘಾಟನೆ ಅಂಗವಾಗಿ ಫೆಬ್ರವರಿ 7ರಂದು ನಡೆಲಿರುವ ಸದ್ಧರ್ಮ ಸಮಾರಂಭದಲ್ಲಿ ಭಾಗವಹಿಸಲು ಅವರನ್ನು ವಿನಂತಿಸಿಕೊಂಡರು. ಪರಮಪೂಜ್ಯರ ನಿಯೋಗದ ಆಮಂತ್ರಣವನ್ನು ಗೌರವ ಪೂರ್ಣವಾಗಿ ಒಪ್ಪಿಕೊಂಡ ಸಚಿವ ಶಿವಾನಂದ ಪಾಟೀಲ ಅವರು ಫೆಬ್ರವರಿ 7ರಂದು ನಡೆಯಲಿರುವ ಸಮಾರಂಭದಲ್ಲಿ ಭಾಗವಹಿಸವುದಾಗಿ ಒಪ್ಪಿಗೆಯನ್ನು ಸೂಚಿಸಿದರು. ನಿಯೋಗದಲ್ಲಿ ಕೊಡೆಕಲ್ಲ ದುರದುಂಡೇಶ್ವರ ಮಠದ ಪೂಜ್ಯ ಶಿವಕುಮಾರ ಮಹಾಸ್ವಾಮಿಗಳು, ನಾವದಗಿ ಬ್ರಹನ್ಮಠದ ಷ.ಬ್ರ.ರಾಜಗುರು ರಾಜೇಂದ್ರ ಒಡೆಯರ್ ಶಿವಾಚಾರ್ಯರು, ಬಸವನ ಬಾಗೇವಾಡಿಯ ಶಿವಪ್ರಕಾಶ ಮಹಾಸ್ವಾಮಿಗಳು,

ಮನಗೂಳಿಯ ಸಂಗನಬಸವ ಮಹಾಸ್ವಾಮಿಗಳು, ದೇವರ ಹಿಪ್ಪರಗಿ ಜಡಿಮಠದ ಜಡಿಸಿದ್ದೇಶ್ವರ ಮಹಾಸ್ವಾಮಿಗಳು, ಚಬನೂರಿನ ಜ್ಯೋತಿಷ್ಯ ರತ್ನ ರಾಮಲಿಂಗಯ್ಯ ಮಹಾಸ್ವಾಮಿಗಳು, ಪರದೇಶಿ ಮಠದ ಶಿವಯೋಗಿ ಶಿವಾಚಾರ್ಯರು, ಕೋಲಾರದ ಪ್ರಭುಕುಮಾರ ಮಹಾಸ್ವಾಮಿಗಳು, ಖ್ಯಾತ ನೇತ್ರ ತಜ್ಞ ಡಾ.ಪ್ರಭುಗೌಡ ಲಿಂಗದಳ್ಳಿ ಹಾಗೂ ದತ್ತು ಹೊಸಮಠ ಇದ್ದರು.

## ಶ್ರೇಷ್ಠ ಕೃಷಿಕ, ಕೃಷಿ ಮಹಿಳೆ ಪ್ರಶಸ್ತಿ ನೀಡಲು ಅರ್ಜಿ ಆಹ್ವಾನ

ನೈಜ್ಯ ದೆಸೆ ನ್ಯೂಸ್

**ರಾಯಚೂರು: ಜನವರಿ 05 (ಕರ್ನಾಟಕ ವಾರ್ತೆ): ರಾಯಚೂರು ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯವು 2026ರ ಜನವರಿ ತಿಂಗಳಿನಲ್ಲಿ ರಾಯಚೂರು ಮುಖ್ಯ ಆವರಣದಲ್ಲಿ "ಕೃಷಿ ಮೇಳ" ಆಯೋಜಿಸುತ್ತಿದೆ. ಕೃಷಿಗೆ ಸಂಬಂಧಿಸಿದ ಹೊಸ ತಂತ್ರಜ್ಞಾನಗಳ ಬಗ್ಗೆ ರೈತ ಬಾಂಧವರಿಗೆ ಮಾಹಿತಿ ಒದಗಿಸುವುದು ಹಾಗೂ ಅವುಗಳನ್ನು ಅಳವಡಿಸಲು ಪ್ರೇರೇಪಿಸುವ ಉದ್ದೇಶ ಈ ಮೇಳದ್ದಾಗಿದೆ.**

ಈ ಮೇಳದಲ್ಲಿ ಕಲ್ಯಾಣ ಕರ್ನಾಟಕ ಭಾಗದ ಪ್ರತಿ ಜಿಲ್ಲಾವಾರು ಶ್ರೇಷ್ಠ ಕೃಷಿಕ ಹಾಗೂ ಕೃಷಿ ಮಹಿಳೆಯನ್ನು ಗುರುತಿಸಿ ಪ್ರಮಾಣ ಪತ್ರವನ್ನು ನೀಡಿ ಸನ್ಮಾನಿಸಲಾಗುವುದು. ಇದರ ಪ್ರಯುಕ್ತ ಅರ್ಜಿ ನಮೂನೆಯನ್ನು ಆಯಾ ಜಿಲ್ಲೆಗಳ ಕೃಷಿ ವಿಜ್ಞಾನ ಕೇಂದ್ರ, ಕೃಷಿ ವಿಸ್ತರಣಾ ಶಿಕ್ಷಣ ಕೇಂದ್ರ ಹಾಗೂ ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯ, ರಾಯಚೂರುನ ವೆಬ್ ಸೈಟ್ ೩ಣಣಠಿ:// ಣಭೆಡಿಚುಛಿಣಡಿ.ಇಚಡಿಟಚಣಚಿಇಚ.ರಠತ.ಟ ನಲ್ಲಿ ದಿನಾಂಕ: 01.01.2026 ರಿಂದ ಪಡೆಯಬಹುದು. ಹೆಚ್ಚಿನ ಮಾಹಿತಿಗಾಗಿ ಹಿರಿಯ ವಿಜ್ಞಾನಿ & ಮುಖ್ಯಸ್ಥರು, ಕೃಷಿ ವಿಜ್ಞಾನ ಕೇಂದ್ರ, ರಾಯಚೂರು, ಬೀದರ, ಕಲಬುರಗಿ, ರದ್ದೇವಾಡಗಿ, ಗಂಗಾವತಿ, ಕವಡಿಮಟ್ಟಿ, ಹಗರಿ ಮತ್ತು ಮುಖ್ಯಸ್ಥರು, ಕೃಷಿ ವಿಸ್ತರಣಾ ಶಿಕ್ಷಣ ಕೇಂದ್ರ, ಭೀಮರಾಯನಗುಡಿ, ಲಿಂಗಸೂಗೂರು, ಕೊಪ್ಪಳ, ನಾಲವಾರ, ದೇವದುರ್ಗ ಮತ್ತು ಹೂವಿನಹಡಗಲಿ ಇವರನ್ನು ಸಂಪರ್ಕಿಸಲು ಕೋರಲಾಗಿದೆ. ಹೆಚ್ಚಿನ ಮಾಹಿತಿಗಾಗಿ ಮೊಬೈಲ್ ಸಂಖ್ಯೆ 9480696314, 9480696315, 9480696316, 9480696317, 9480696318, 9480696319, 9480696334, 9480696335, 9480696336ಗಳಿಗೆ ಸಂಪರ್ಕಿಸಬಹುದಾಗಿದೆ. ಭರ್ತಿ ಮಾಡಿದ ಅರ್ಜಿಗಳನ್ನು ಹಿಂತಿರುಗಿಸಲು ಜನವರಿ 16 ಕೊನೆಯ ದಿನವಾಗಿರುತ್ತದೆ. ಅರ್ಜಿಗಳನ್ನು ಆಯಾ ಜಿಲ್ಲೆಗಳ ಕೃಷಿ ವಿಜ್ಞಾನ ಕೇಂದ್ರ ಹಾಗೂ ಕೃಷಿ ವಿಸ್ತರಣಾ ಶಿಕ್ಷಣ ಕೇಂದ್ರಗಳ ಕಚೇರಿಗೆ ಸಲ್ಲಿಸಲು ತಿಳಿಸಲಾಗಿದೆ ಎಂದು ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದ ವಿಸ್ತರಣಾ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಶಿಕ್ಷಣಕ್ಕೆ ಹೆಚ್ಚಿನ ಮಹತ್ವ: ಡಾ.ಶರಣಪ್ರಕಾಶ ಪಾಟೀಲ

ನೈಜ್ಯ ದೆಸೆ ನ್ಯೂಸ್

**ಲಿಂಗಸ್ಗೂರು: 'ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಶಿಕ್ಷಣಕ್ಕೆ ಹೆಚ್ಚಿನ ಮಹತ್ವ ನೀಡಲಾಗಿದೆ' ಎಂದು ಜಿಲ್ಲಾ ಉಸ್ತುವಾರಿ ಸಚಿವ ಡಾ.ಶರಣಪ್ರಕಾಶ ಪಾಟೀಲ ಹೇಳಿದರು.**

ಪಟ್ಟಣದ ಬಸವೇಶ್ವರ ಪದವಿ ಪೂರ್ವ ಕಾಲೇಜಿನ ಬೆಳ್ಳಿ ಸಂಭ್ರಮದ ಪ್ರಯುಕ್ತ ಶನಿವಾರ ಸಂಜೆ ಹಮ್ಮಿಕೊಂಡಿದ್ದ ಸಾಂಸ್ಕೃತಿಕ ಸಂಜೆ ಕಾರ್ಯಕ್ರ ಉದ್ಘಾಟಿಸಿ ಅವರು ಮಾತನಾಡಿದರು. ಸರ್ಕಾರ ಮೆರಿಟ್ ಆಧಾರದಲ್ಲಿ ಹಾಗೂ ಪಾರದರ್ಶಕತೆಯಿಂದ ನೇಮಕಾತಿ ಮಾಡುತ್ತಿರುವುದರಿಂದ ಯಾರು ಉತ್ತಮವಾಗಿ ಓದುತ್ತಾರೋ ಅವರಿಗೆ ಉತ್ತಮ ಭವಿಷ್ಯ ರೂಪಿಸಲಾಗುತ್ತದೆ. ವಿದ್ಯಾರ್ಥಿಗಳು



ಕಠಿಣ ಪರಿಶ್ರಮವಹಿಸಬೇಕು.

ಎಂದ ಅವರು, 'ವಿವಿ ಸಂಘ 25 ವರ್ಷ ಪೂರೈಸಿದ್ದಕ್ಕೆ ಇಲ್ಲಿನ ಆಡಳಿತ ಮಂಡಳಿ ಸದಸ್ಯರ ನಿಸ್ವಾರ್ಥ ಸೇವೆ ಪ್ರಮುಖ ಕಾರಣ' ಎಂದರು. ಸಿಂಧನೂರು ಶಾಸಕ ಹಂಪನಗೌಡ ಬಾದರ್ಲಿ, ವಿಧಾನ ಪರಿಷತ್ ಸದಸ್ಯ ಎ.ವಸಂತಕುಮಾರ, ವೀರಶೈವ ವಿದ್ಯಾವರ್ಧಕ ಸಂಘದ ಅಧ್ಯಕ್ಷ ಅಮರೇಗೌಡ ಪಾಟೀಲ ಬಯ್ಯಾಪುರ, ಉಪಾಧ್ಯಕ್ಷ ಮಲ್ಲೇಶಗೌಡ ಮಟ್ಟೂರು ಹಾಗೂ ಇನ್ನಿತರಿದ್ದರು.

# ವಿವಿಧೆಡೆ ಲೋಕಾಯುಕ್ತ ದಾಳಿ: ನ್ಯಾಯಮೂರ್ತಿ ಬಿ.ಎಸ್.ಪಾಟೀಲ್ ನೇತೃತ್ವ

ನೈಜ್ಯ ದೆಸೆ ನ್ಯೂಸ್

**ಕರ್ನಾಟಕ ಲೋಕಾಯುಕ್ತ ನ್ಯಾಯಮೂರ್ತಿ ಬಿ.ಎಸ್. ಪಾಟೀಲ್ ಇಂದು ವಿವಿಧ ಕಚೇರಿಗಳಿಗೆ ಭೇಟಿ ನೀಡಿದರು.ಕಲಬುರಗಿ ಜಿಲ್ಲೆಯಲ್ಲಿ ಒಟ್ಟು 15 ತಂಡಗಳಿಂದ ವಿವಿಧೆಡೆ ಏಕಕಾಲದಲ್ಲಿ ದಾಳಿ ನಡೆಸಲಾಯಿತು.**

ಕಲಬುರಗಿ ಮಹಾನಗರ ಪಾಲಿಕೆ, ಸಬ್ ರೆಜಿಸ್ಟರ್ ಕಚೇರಿ, ಜೇವರ್ಗಿ ತಾಲೂಕಿನ ಶಾಲೆ, ಹಾಸ್ಟೆಲ್ ಗಳ ಮೇಲೆ ದಾಳಿ ನಡೆಸಲಾಗಿ ಕಾರ್ಯವೈಖರಿಯನ್ನು ಪರಿಶೀಲನೆ ನಡೆಸಲಾಯಿತು. ಪಾಲಿಕೆ ಟೆಂಡರ್ ಸೆಕ್ಷನ್ ನಲ್ಲಿ ಅಧಿಕಾರಿ ಸಿಬಂದಿಗಳೇ ಇಲ್ಲದಿರುವುದು ಕಂಡು ಬಂತು. ಪಾಲಿಕೆ ಕಚೇರಿ ಮೇಲೆ ದಾಳಿ ನಡೆಸಿದ ಲೋಕಾಯುಕ್ತ ಕಚೇರಿಯ ಹಿರಿಯ ನ್ಯಾಯಾಧೀಶ ವಿಜಯಾನಂದ ಆಕ್ರೋಶ ವ್ಯಕ್ತಪಡಿಸಿದರು.



ಸಂಬಂಧಿಸಿದ ಸೆಕ್ಷನ್ ನಲ್ಲಿ ಅಧಿಕಾರಿ, ಸಿಬ್ಬಂದಿಗಳು ಇಲ್ಲದಿರುವುದಕ್ಕೆ ತರಾಟೆಗೆ ತೆಗೆದುಕೊಂಡರು. ಪ್ಯೂವುನ್ ಗಳು ಡ್ರೆಸ್ ಕೋಡ್ ಧರಿಸದಿರುವುದಕ್ಕೆ ತೀವ್ರ ಆಕ್ರೋಶವನ್ನೂ ವ್ಯಕ್ತಪಡಿಸಲಾಯಿತು. ಟೆಂಡರ್ ವಿಭಾಗದ ಕಂಪ್ಯೂಟರ್ ಆಪರೇಟರ್ ಗಳ ಫೋನ್ ಪೇ ಯನ್ನು ಲೋಕಾಯುಕ್ತ ಅಧಿಕಾರಿಗಳು ಪರಿಶೀಲಿಸಿದರು.

## ನೇಮಕಾತಿ ಪ್ರಕಟಣೆ

DHFWS ಉಡುಪಿ ನೇಮಕಾತಿ 2026–43 ನರ್ಸ್, ಮಲ್ಟಿ ರಿಹ್ಯಾಬಿಲಿಟೇಶನ್ ವರ್ಕರ್ ಹುದ್ದೆಗಳಿಗೆ ಆಫ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಿ DHFWS ಉಡುಪಿ ನೇಮಕಾತಿ 2026: 43 ನರ್ಸ್, ಮಲ್ಟಿ ರಿಹ್ಯಾಬಿಲಿಟೇಶನ್ ವರ್ಕರ್ ಹುದ್ದೆಗಳಿಗೆ ಅರ್ಜಿ ಸಲ್ಲಿಸಿ. ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಂಘ ಉಡುಪಿ ಜನವರಿ 2026 ರ ಆಊಊಈಘಖ ಉಡುಪಿ ಅಧಿಕೃತ ಅಧಿಸೂಚನೆಯ ಮೂಲಕ ನರ್ಸ್, ಮಲ್ಟಿ ರಿಹ್ಯಾಬಿಲಿಟೇಶನ್ ವರ್ಕರ್ ಹುದ್ದೆಗಳನ್ನು ಭರ್ತಿ ಮಾಡಲು ಅರ್ಹ ಮತ್ತು ಆಸಕ್ತ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಿದೆ. ಉಡುಪಿ ಕರ್ನಾಟಕ ಸರ್ಕಾರದಲ್ಲಿ ವೃತ್ತಿಯನ್ನು ಹುಡುಕುತ್ತಿರುವ ಉದ್ಯೋಗಾಕಾಂಕ್ಷಿಗಳು ಈ ಅವಕಾಶವನ್ನು ಬಳಸಿಕೊಳ್ಳಬಹುದು. ಆಸಕ್ತ ಅಭ್ಯರ್ಥಿಗಳು ಜನವರಿ 16, 2026 ರಂದು ಅಥ–ವಾ ಮೊದಲು ಆಫ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಬಹುದು. ಆಫ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ಪ್ರಾರಂಭ ದಿನಾಂಕ: 31–12–2025 ಆಫ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ: 16–ಜನವರಿ–2026 ಅಧಿಕೃತ ವೆಬ್‌ಸೈಟ್: udupi.nic.in

## ಶಿಷ್ಟಾಚಾರ ಉಲ್ಲಂಘಿಸಿದ ಡಿಎಂಒ ವಿರುದ್ಧ ಧಿಕ್ಕಾರ ಕೂಗಿದ ಬಸನಗೌಡ ಬಾದರ್ಲಿ ಬೆಂಬಲಿಗರು.

ನೈಜ್ಯ ದೆಸೆ ನ್ಯೂಸ್

**ಕೇಂದ್ರ ಬಸ್ ನಿಲ್ದಾಣದಲ್ಲಿ ಶಾಸಕ ಹಂಪನಗೌಡ ಬಾದರ್ಲಿ ನಗರದ ವಿದ್ಯಾರ್ಥಿಗಳೊಂದಿಗೆ ನಡೆಸಿದ ಸಂವಾದ ಕಾರ್ಯಕ್ರಮದಲ್ಲಿ ವಿಧಾನ ಪರಿಷತ್ ಸದಸ್ಯ ಬಸನಗೌಡ ಬಾದರ್ಲಿಯವರನ್ನು ವೇದಿಕೆಗೆ ಕರೆಯಿಸಿ ಶಿಷ್ಟಾಚಾರ ಉಲ್ಲಂಘಿಸಿ ಅವಮಾನ ಮಾಡಿದ್ದಾರೆಂದು ಎಂಎಲ್ಸಿ ಬೆಂಬಲಿಗರು ಡಿಪೋ ಮೆನೇಜರ್ ಹೊನ್ನಪ್ಪ ಸೇ–ರಿದಂತೆ ಡಿಟಿಒ, ಬಸ್ ಡಿಪೋಗೇಟ್ ಹಾಕಿ ಆಕ್ರೋಶ ಹೊರ ಹಾಕಿದ್ದು ಕಂಡುಬಂತು.**

ಸೋಮವಾರ ತಾಲೂಕಿನ ಕಾಲೇಜು ವಿದ್ಯಾರ್ಥಿಗಳಿಗೆ ಓಡಾಡಲು ಶಾಸಕ ಹಂಪನಗೌಡ ಬಾದರ್ಲಿ 14 ಬಸ್‌ಗಳಿಗೆ ಚಾಲನೆ



ನೀಡಿ, ವಿದ್ಯಾರ್ಥಿಗಳ ಜೊತೆಗೆ ಸಂವಾದ ನಡೆಸಿ, ವೇದಿಕೆಯಲ್ಲಿ ಮಾತನಾಡಲು ಅವಕಾಶ ಕೊಡದೆ, ಕಾರ್ಯಕ್ರಮ ಮುಗಿಸಿ ವಿಧಾನ ಪರಿಷತ್ ಶಾಸಕ ಬಸನಗೌಡ ಬಾದರ್ಲಿಯವರಿಗೆ ಅವಮಾನ ಮಾಡಿದ್ದಾರೆ. ಈ ಕುರಿತು ಡಿಪೋ ಮ್ಯಾನೇಜರ್ ಹೊನ್ನಪ್ಪ ಇದು ನಮ್ಮ ಕಾರ್ಯಕ್ರಮ ಅಲ್ಲ, ಶಾಸಕರು ಮಾಡಿದ್ದು ಅಂತ ಹೇಳುತ್ತಿದ್ದಾರೆ.

ಮೇಲಾಧಿಕಾರಿಗಳ ಮೂಲಕ ನಡೆದ ಪತ್ರದ ವ್ಯವಹಾರಗಳು ಪರಿಶೀಲಿಸಿದಾಗ ಸತ್ಯಾಸತ್ಯತೆ ತಿಳಿಯುತ್ತದೆ. ಅಧಿಕಾರಿಗಳು ರಾಜಕಾರಣ ಮಾಡಬೇಡಿ ನೌಕರಿ ಮಾಡಿ ಎಂದು ಅಧಿಕಾರಿಗಳಿಗೆ ಧಿಕ್ಕಾರ ಕೂಗಿದರು. ಎಂಎಲ್ಸಿ ಬೆಂಬಲಿಗರು ಕೂಗಿ ಡಿಪೋಗೇಟ್ ಹಾಕಿ, ಬೇಕೆ ಬೇಕು ನ್ಯಾಯ ಬೇಕೆಂದು ಕೂಗಾಡಿ ರಸ್ತೆ ಬಂದ್ ಮಾಡಲು ಮುಂದಾದಾಗ ಡಿವೈ–ಎಸ್ಪಿ ಜಿ.ಚಂದ್ರಶೇಖರ್ ಪ್ರತಿಭಟನೆ ನಿರತ ಬೆಂಬಲಿಗರನ್ನು ತಮ್ಮ ಪೊಲೀಸ್ ವಾಹನದಲ್ಲಿ ಕರೆದೊಯ್ದು ನಂತರ ಬಿಡುಗಡೆ ಮಾಡಿದರು.

## ಕೊತ್ತದೊಡ್ಡಿ: ಹಾಲುಗಂಬ ಉತ್ಸವ

ನೈಜ್ಯ ದೆಸೆ ನ್ಯೂಸ್

**ದೇವದುರ್ಗ: ಅರಕೇರಾ ತಾಲ್ಲೂಕಿನ ಕೊತ್ತದೊಡ್ಡಿ ಗ್ರಾಮದ ಐತಿಹಾಸಿಕ ಪ್ರಸಿದ್ಧ ಹಿರೇಗುಡದಯ್ಯ (ಆಂಜನೇಯ ದೇವಸ್ಥಾನ) ದೇವಸ್ಥಾನದ ಮುಂದೆ ಹಾಲುಗಂಬ ಉತ್ಸವ ಭಾನುವಾರ ಸಂಜೆ ವಿಜೃಂಭಣೆಯಿಂದ ನಡೆಯಿತು. ವಿಶಿಷ್ಟವಾಗಿ ನಡೆಯುವ ಉತ್ಸವ ನೋಡಲು ಸಾವಿರಾರು ಜನ ಸೇರಿದ್ದರು.**



ಒಂದು ಗಂಟೆಗೂ ಅಧಿಕ ಸಮಯ ಹಾಲುಗಂಬ ಉತ್ಸವ ಸ್ಪರ್ಧೆ ನಡೆಯಿತು. ಒಬ್ಬರ ಮೇಲೆ ಒಬ್ಬರು ಹಾಲುಗಂಬ ಹತ್ತುತ್ತಾ ಕೆಳಗೆ ಜಾರಿ ಬೀಳುವ ದೃಶ್ಯಗಳನ್ನು ಕಂಡು ನೆರೆದಿದ್ದ ಯುವಕರು ಶಿಳ್ಳೆ ಚಪ್ಪಾಳೆಗಳ ಮೂಲಕ ಸ್ಪರ್ಧಾಳುಗಳನ್ನು ಹು–ರಿದುಂಬಿಸುತ್ತಿದ್ದರು. ಬೃಹತ್ ಕಂಬಕ್ಕೆ ಜಿಡ್ಡು ತರುವ ಹಾಗೂ ಹೈನು ಪದಾರ್ಥಗಳನ್ನು ಲೇಪಿಸಿದ್ದು ಕಂಬ ಮೇಲೆ ಕುಳಿತ ವ್ಯಕ್ತಿಯೊಬ್ಬರು ಹಾಲು, ಮೊಸರು ಕಂಬಕ್ಕೆ ಸುರಿದಾಗ ಕಂಬದ ತುದಿ ತಲುಪಿದಾಗ ಗೊಲ್ಲ ಸಮುದಾಯದ ಯುವಕರು ಹರಸಾಹಸ ಮಾಡಿ ಕೊನೆಗೆ ಜಾರಿ ಕೆಳಗೆ ಬೀಳುತ್ತಿರುವುದನ್ನು ಕಂಡು ನೆರೆದ ಜನ ನಗೆಗಡಲಲ್ಲಿ ತೇಲಿದರು. ಹಗ್ಗದ ಸಹಾಯ ಪಡೆದು ಕಂಬ ಏರಿದರು. ಅರಕೇರಾ, ದೇವದುರ್ಗ ಮತ್ತು ಸಿರವಾರ ತಾಲ್ಲೂಕಿನ ವಿವಿಧ ಗ್ರಾಮಗಳ ಜನರು ಭಾಗವಹಿಸಿದ್ದರು.

## ಪುರಾಣ ಪ್ರವಚನ ಪುಣ್ಯಕಥೆ ಆಲಿಸುವುದರಿಂದ ಮನಶುದ್ಧಿ ಶ್ರೀಡಾ.ಕೋರಿಸಿದ್ದೇಶ್ವರಶಿವಾಚಾರ್ಯ ಮಹಾಸ್ವಾಮಿ



ನೈಜ್ಯ ದೆಸೆ ನ್ಯೂಸ್

**ಅರಕೇರಾ 05: ನೀಲಗಲ್ ಮಠದಲ್ಲಿ ತಾತನ ಜಾತ್ರೆ ನಿಮಿತ್ಯ ಶ್ರೀ ಶಿವಶರಣೆ ಹೇಮರೆಡ್ಡಿ ಮಲ್ಲಮ್ಮ ತಾಯಿಯ ಪುರಾಣ–ಕೈನಾಲವಾರ ಮಠದ ಶ್ರೀ ಕೋರಿಸಿದ್ದೇಶ್ವರ ಮಠದ ಶ್ರೀ ಡಾಕೋರಿಸಿದ್ದೇಶ್ವರಶಿವಾಚಾರ್ಯ ಮಹಾಸ್ವಾಮಿಗಳು ಚಾಲನೆ ನೀಡಿದರು.**

ಅವರು ನೀಲಗಲ್ ಮಠದಲ್ಲಿ ಜಾತ್ರಾ ನಿಮಿತ್ಯ ಹಮ್ಮಿಕೊಂಡಿದ್ದ ಶಿವಶರಣೆ ಹೇಮರೆಡ್ಡಿ ಮಲ್ಲಮ್ಮ ಪುರಾಣ ಪ್ರವಚನ ಕಾರ್ಯಕ್ರಮ ಪುರಾಣ ಮನುಷ್ಯನ ಜೀವನಕ್ಕೆ ಅಗತ್ಯ ಪುರಾಣ ಪುಣ್ಯ ಕಥೆಗಳನ್ನು ಕೇಳೋದ–ರಿಂದ ಮನುಷ್ಯನ ಜೀವನದಲ್ಲಿ ಪುಣ್ಯ ಪುರಾಣ ಪ್ರವಚನ ಆಲಿಸುವುದರಿಂದ ಒಳ್ಳೆಯ ವಿಚಾರಗಳು ಮೂಡುತ್ತವೆ. ಭಗವಂತನ, ಶರಣರ, ಮಹಾತ್ಮರ ಜೀವನ ಚರಿತ್ರೆಗಳನ್ನು ಕೇಳುವುದರಿಂದ ವ್ಯಕ್ತಿತ್ವ ಉನ್ನತಿಗೊಳ್ಳುತ್ತದೆ ಅವರು ಬದುಕು ನೆಮ್ಮದಿಯಿಂದ ಕೂಡಿರುತ್ತದೆ ಎಂದು ನುಡಿದರು. ಕಾರ್ಯಕ್ರಮದ ಸಾನಿಧ್ಯವನ್ನು ಶ್ರೀ ಷ?ಬ್ರ? ಡಾಪಂಚಾಕ್ಷರಶಿವಾಚಾರ್ಯಮಹಾಸ್ವಾಮಿಗಳ ು ವಹಿಸದ್ದರು. ಶ್ರೀ ಷ?ಬ್ರ?ಅಭಿನವ ರೇಣುಕ ಶಾಂತಮಲ್ಲ ಶಿವಾಚಾರ್ಯ ಮಹಾಸ್ವಾಮಿಗಳು.

ಶ್ರೀಷಬ್ರವಿರೂಪಾಕ್ಷಪಂಡಿತರಾಧ್ಯಶಿವಾಚರ್ಯ ಮಹಾಸ್ವಾಮಿಗಳು ಕಲ್ಮಠ ಮಾನ್ವಿ.ಶ್ರೀ ಷ?ಬ್ರ? ಶಂಭುಸೋಮನಾಥ–ಶಿವಾಚಾರ್ಯಮಹಾಸ್ವಾಮಿಗಳು ಸುಲ್ತಾನಪುರ. ಶ್ರೀ ವಿಶ್ವರಾಧ್ಯ ದೇವರು ಚೆಟ್ನಲ್ಲಿ.ಶ್ರೀಮಹಾಂತ ದೇವರು ಲೋಕಾಪೂರ. ಉಪಸ್ಥಿತಿ ಇದ್ದರು.

## ಜ. 9ರಂದು ರಾಜ್ಯಮಂತ್ರಿಯಿಂದ ಎಪಿಎಂಸಿ ಹಮಾಲಿಗಳಿಗೆ ನಿವೇಶನ ಹಕ್ಕುಪತ್ರ ವಿತರಣೆ: ಎಂ.ಬಿ. ಸಿದ್ರಾಮಯ್ಯಸ್ವಾಮಿ

ನೈಜ್ಯ ದೆಸೆ ನ್ಯೂಸ್

**ಮಾನ್ವಿ: ಪಟ್ಟಣದ ಪತ್ರಿಕಾ ಭವನದಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಶ್ರೀ ಉದ್ಭವ ಆಂಜನೇಯ್ಯ ಎಪಿಎಂಸಿ ಹಮಾಲರ ಸಂಘ?ಮಾನ್ವಿ (ಎಐಟಿಯುಸಿ) ಸಂಯೋಜಿತ ಕಾರ್ಯಾಧ್ಯಕ್ಷ ಎಂ.ಬಿ. ಸಿದ್ರಾಮಯ್ಯಸ್ವಾಮಿ ಮಾತನಾಡಿ ಮಾಹಿತಿಯನ್ನು ನೀಡಿದರು.**

ಮಾನ್ವಿ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಯಲ್ಲಿ ಕಳೆದ ಹಲವು ವರ್ಷಗಳಿಂದ ಹಮಾಲಿ ಕಾರ್ಮಿಕರಾಗಿ ಸೇವೆ ಸಲ್ಲಿಸುತ್ತಿರುವ ಹಮಾಲಿಗಳಿಗೆ ತಮ್ಮದೇ ಸ್ವಂತ ಮನೆ ಹೊಂದುವ ಅವಕಾಶ ಕಲ್ಪಿಸುವ ಉದ್ದೇಶದಿಂದ 2004–05ರಲ್ಲಿ ಅಂದಿನ ಎಪಿಎಂಸಿ ಅಧ್ಯಕ್ಷರಾಗಿದ್ದ ಹಾಗೂ ಹಾಲಿ ಶಾಸಕ ಹಂಪಯ್ಯನಾಯಕರವರು ಪಟ್ಟಣದ



ಹೊರವಲಯ ಮುಸ್ಲೂರು ರಸ್ತೆಯಲ್ಲಿ 10 ಎಕರೆ 27 ಗುಂಟೆ ಜಮೀನು ಖರೀದಿ ಮಾಡಿದ್ದರು. ಇದರಲ್ಲಿ ಹಮಾಲಿಗಳಿಗಾಗಿ 2 ಎಕರೆ 25 ಗುಂಟೆ ಜಮೀನಿನಲ್ಲಿ 120 ನಿವೇಶನಗಳನ್ನು ರಚಿಸಲಾಗಿ–ತ್ತು. ಅದೇ ಜಾಗದಲ್ಲಿ ರೈತರಿಗೆ ಅಗತ್ಯವಿರುವ ಜಾನುವಾರು ಮಾರುಕಟ್ಟೆ ಹಾಗೂ ಗುದಾಮು ನಿರ್ಮಾಣಕ್ಕೂ ವ್ಯವಸ್ಥೆ ಮಾಡಲಾಗಿತ್ತು.

ಆದಾಗ್ಯೂ, ವಿವಿಧ ಕಾರಣಗಳಿಂದ ಇಷ್ಟು ವರ್ಷ ಹಮಾಲಿಗಳಿಗೆ ಹಕ್ಕುಪತ್ರ ನೀಡುವ ಕಾರ್ಯ ವಿಳಂಬವಾಗಿತ್ತು. ಈ ಹಿನ್ನೆಲೆಯಲ್ಲಿ ಶಾಸಕ ಹಂಪಯ್ಯನಾಯಕ, ಸಚಿವ ಎನ್. ಎಸ್. ಬೋಸರಾಜು ಹಾಗೂ ಎಪಿಎಂಸಿ ಉನ್ನತಾಧಿಕಾರಿಗಳಿಗೆ ಸಂಘವು ಹಲವು ಬಾರಿ ಮನವಿ ಸಲ್ಲಿಸಿತ್ತು. ನಂತರ ನ. 20ರಂದು ಮಾನ್ವಿ ಎಪಿಎಂಸಿ ಸಭೆಯಲ್ಲಿ ವಿವಿಧ ನಿಯಮ–ನಿಬಂಧನೆಗಳ ಪರಿಶೀಲನೆಯ ನಂತರ 73 ನಿವೇಶನಗಳನ್ನು ಹಮಾಲಿಗಳಿಗೆ ಹಂಚಿಕೆ ಮಾಡುವಂತೆ ಅಧಿಕೃತ ಆದೇಶ ಹೊರಬಿದ್ದಿದೆ. ಈ ಹಿನ್ನೆಲೆಯಲ್ಲಿ ಜ. 9ರಂದು ಮಾನ್ವಿ ಎಪಿಎಂಸಿ ಆವರಣದಲ್ಲಿ ಸಚಿವ ಎನ್. ಎಸ್. ಬೋಸರಾಜು ಹಾಗೂ ಶಾಸಕ ಹಂಪಯ್ಯನಾಯಕರವರು ಹಮಾಲಿಗಳಿಗೆ ನಿವೇಶನ ಹಕ್ಕುಪತ್ರಗಳನ್ನು ವಿತರಿಸಲಿದ್ದಾರೆ.

ನಿವೇಶನ ಹಂಚಿಕೆಗೆ ಸಹಕಾರ ನೀಡಿದ ಸಚಿವರು, ಶಾಸಕ ಹಾಗೂ ಎಪಿಎಂಸಿ ಕಾರ್ಯದರ್ಶಿಯನ್ನು ಕಾರ್ಯಕ್ರಮದಲ್ಲಿ ಅದ್ದೂರಿಯಾಗಿ ಸನ್ಮಾನಿಸುವುದಾಗಿ ತಿಳಿಸಿದ್ದಾರೆ. ಕಾರ್ಯಕ್ರಮದಲ್ಲಿ ಉದ್ಭವ ಆಂಜನೇಯ್ಯ ಎಪಿಎಂಸಿ ಹಮಾಲರ ಸಂಘದ ಅಧ್ಯಕ್ಷ ಹನುಮಂತ, ಖಜಾಂಚಿ ರಾಮಣ್ಣ, ಹಮಾಲಿ ಕಾರ್ಮಿಕರಾದ ಫಕೀರಯ್ಯ, ಬಾಷ, ಹಂಪಯ್ಯ, ಶರಣಪ್ಪ, ಕೊಂಡಯ್ಯ, ವೀರೇಶ, ಫಕೃದ್ದಿನ್, ದೇವ, ಜಂಬಯ್ಯಸ್ವಾಮಿ ಸೇ–ರಿದಂತೆ ಅನೇಕರು ಉಪಸ್ಥಿತರಿದ್ದರು.

## ಶ್ರೀ ಅಯ್ಯಪ್ಪ ಸ್ವಾಮಿಯ ಮಹಾ ಪೂಜಾ ಕಾರ್ಯಕ್ರಮದಲ್ಲಿ ಭಾಗವಹಿಸಿದ ಬಿಜೆಪಿ ಮುಖಂಡ ಬಸನಗೌಡ ಪಾಟೀಲ



ನೈಜ್ಯ ದೆಸೆ ನ್ಯೂಸ್

**ತಾಳಿಕೋಟಿ: ಪಟ್ಟಣದಲ್ಲಿ ಭಾನುವಾರ ಜರುಗಿದ ಶ್ರೀ ಅಯ್ಯಪ್ಪ ಸ್ವಾಮಿಯ ಮಹಾ ಪೂಜಾ ಕಾರ್ಯಕ್ರಮದಲ್ಲಿ ಭಾಗವಹಿಸಿದ ಬಿಜೆಪಿ ಮುಖಂಡ ಬಸನಗೌಡ ಪಾಟೀಲ ಯಡಿಯಾಪೂರ ಅವರು ಪರಮ ಪೂಜ್ಯ ಶ್ರೀ ಸಿದ್ದಲಿಂಗ ಮಹಾಸ್ವಾಮಿಗಳ ಹಾಗೂ ಪೂಜ್ಯ ಗುರುಲಿಂಗ ಶಿವಾಚಾರ್ಯ ಮಹಾಸ್ವಾಮಿಗಳ ಆಶೀರ್ವಾದ ಪಡೆದುಕೊಂಡರು.**

## ದಿಟ್ಟ ಹೋರಾಟಗಾರ್ತಿ ಶಿಕ್ಷಕಿ ಸಾವಿತ್ರಿಬಾಯಿ ಫುಲೆ: ಡಾ.ಸುಜಾತಾ ಚಲವಾದಿ

ನೈಜ್ಯ ದೆಸೆ ನ್ಯೂಸ್

**ತಾಳಿಕೋಟಿ: ಭಾರತದ ಮೊದಲ ಶಿಕ್ಷಕಿ ದಿಟ್ಟ ಹೋರಾಟಗಾರ್ತಿ ಸಾವಿತ್ರಿಬಾಯಿ ಫುಲೆ ಹೆಣ್ಣು ಮಕ್ಕಳ ಶಿಕ್ಷಣಕ್ಕಾಗಿ ಹಗಲಿರುಳು ದುಡಿದ ಮಹಾನ್ ಸಾಧಕಿಯಾಗಿದ್ದಾಳೆ. ಅಂತಹ ತಾಯಿಯನ್ನು ಇಂದು ನೆನೆಯುವದು ಎಲ್ಲ ಹೆಣ್ಣು ಮಕ್ಕಳ ಕರ್ತವ್ಯವೆಂದು ಚನ್ನ ಬಸಮ್ಮ ಚಂದಪ್ಪ ಪ್ರತಿಷ್ಠಾನದ ಅಧ್ಯಕ್ಷೆ ಡಾ.ಸುಜಾತಾ ಚಲವಾದಿ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.**

ತಾಳಿಕೋಟಿಯಲ್ಲಿ ಚನ್ನಬಸಮ್ಮ ಚಂದಪ್ಪ ಪ್ರತಿಷ್ಠಾನ(ರಿ) ಕಾರ್ಯಕ್ರಮದಲ್ಲಿ ಅಕ್ಷರದ ಅವ್ವ ಸಾವಿತ್ರಿಬಾಯಿ ಫುಲೆ ಅವರ ಜನ್ಮ ದಿನಾಚರಣೆ ಯನ್ನು ಆಚರಿಸುತ್ತ



ಮನುವಿನ ವ್ಯಾಖ್ಯಾನವನ್ನು ಚಾಚೂ ತಪ್ಪದೇ ಮುನ್ನಡೆಸಿಕೊಂಡು ಹೋಗುತಿದ್ದ ಕಾಲಘಟ್ಟದಲ್ಲಿ ಪುರುಷ ಪ್ರಧಾನ ವ್ಯವಸ್ಥೆಯ ವಿರುದ್ದ ಸಮಾಜವನ್ನು ವೈಚಾರಿಕತೆಗೆ ಹಚ್ಚಿ ಶಿಕ್ಷಣಕ್ಕೆ ದಾರಿ ತೋರಿಸಿದವರು ಎಂದು ಮಾತನಾಡಿದರು. ಕಾರ್ಯಕ್ರಮದಲ್ಲಿ ಚಿದಾನಂದ ಮರ್ಜಿಯವರು ಸಾವಿತ್ರಿಬಾಯಿ ಮತ್ತು ಜ್ಯೋತಿಬಾ ಫುಲೆ ಸಾಮಾಜಿಕವಾಗಿ ದುಡಿದ ದಂಪತಿಗಳು ಹೆಣ್ಣು ಮಕ್ಕಳ ಶಿಕ್ಷಣಕ್ಕೆ ಮಹತ್ವಕೊಟ್ಟವರು ಸತ್ಯ ಶೋಧಕ ಸಮಾಜ ಸ್ಥಾಪಿಸಿದ ಮಹಾತ್ಮರು ಎಂದು ಉಪನ್ಯಾಸವನ್ನು ನೀಡಿದರು.

ಅತಿಥಿಗಳಾದ ಕುಸಪ್ಪಾ ದೊಡಮನಿ, ಧನಲಕ್ಷ್ಮಿ ದೊಡಮನಿ, ಶ್ರೀನಿವಾಸ ಹುನಗುಂದ, ಶರಣಮ್ಮ ಮರ್ಜಿ ಹಾಗೂ ಶ್ವೇತಾ, ಸಿದ್ದಾರೂಢ, ಚಂದ್ರಶೇಖರ, ಕಾಸ್ಸಸಾಹೇಬ,ಜ್ಯೋತಿಸಾಹೇಬ ಇತರರು ಉಪಸ್ಥಿತರಿದ್ದರು. ನೇಹಾ ಮರ್ಜಿ ಕಾರ್ಯಕ್ರಮವನ್ನು ನಿರೂಪಿಸಿದರು. ಅರುಂಧತಿ ಚಲವಾದಿ ಸ್ವಾಗತಿಸಿದರು. ಚಿನ್ನು ಚಲವಾದಿ ವಂದನಾರ್ಪಣೆಯನ್ನು ಮಾಡಿದರು.

ನೈಜ್ಯ ದೆಸೆ
ಕನ್ನಡ ದಿನಪತ್ರಿಕೆಯನ್ನು ತಪ್ಪದೆ ಓದಿರಿ.

## ಮಾಜಿ ಸಚಿವ ವೆಂಕಟರಾವ್ ನಾಡಗೌಡ ಅವರ ಜನ್ಮದಿನದಲ್ಲಿ "ಶಾಂಭವಿ ಶ್ರೀರಕ್ಷೆ" ಅಭಿಧಾನದ ಪುರಸ್ಕಾರ

ನೈಜ್ಯ ದೆಸೆ ನ್ಯೂಸ್

**ಸಿಂಧನೂರು: ಜ 05 ಸಿಂಧನೂರು ಶ್ರೀ ಶಾಂಭವಿ ಪುಣ್ಯಾಶ್ರಮ ಪಿಡಬ್ಲ್ಯೂಡಿ ಕ್ಯಾಂಪ್ ಸಿಂಧನೂರು ಶ್ರೀಮಠ ಸೇವಾ ಟ್ರಸ್ಟ್ (ರಿ)ಹರೇಟನೂರು ಅಕ್ಷಯ ಆಹಾರ ಜೋಳಿಗೆ ಸೇವಾ ಟ್ರಸ್ಟ್ (ರಿ) ಸಿಂಧನೂರು ಕಾರುಣ್ಯ ನೆಲೆ ವೃದ್ಧಾಶ್ರಮ ಹಾಗೂ ವಯಸ್ಕರ ಬುದ್ಧಿಮಾಂದ್ಯ ಆಶ್ರಮ ಇವರುಗಳ ವತಿಯಿಂದ ಮಾಜಿ ಸಚಿವರು ಹಾಗೂ ಹಾಲಿ ಕೆ. ಓ.ಎಫ್. ರಾಜ್ಯಾಧ್ಯಕ್ಷರಾದ ವೆಂಕಟರಾವ್ ನಾಡಗೌಡ ಅವರ 69ನೇ ವರ್ಷದ ಜನ್ಮದಿನ ಸಮಾರಂಭ ಕಾರ್ಯಕ್ರಮ ನಡೆಯುವ ಕಾರುಣ್ಯ ನೆಲೆ ವೃದ್ಧಾಶ್ರಮದಲ್ಲಿ ಅವರ ಸರಳ ಸಾಮಾನ್ಯ ವ್ಯಕ್ತಿತ್ವ ಹಾಗೂ ಅವರ ನಾಡಗೌಡ್ರು ಫೌಂಡೇಶನ್ ವತಿಯಿಂದ ಹಮ್ಮಿಕೊಂಡಿರುವ ಹಲವಾರು ಸಮಾಜ ಪರ ಕಾರ್ಯಗಳನ್ನು ಗುರುತಿಸಿ ಅವರಿಗೆ "ಶಾಂಭವಿ ಶ್ರೀರಕ್ಷೆ " ಎನ್ನುವ ಅಭಿದಾನದೊಂದಿಗೆ ಸನ್ಮಾನಿಸಿ ಗೌರವಿಸಿ ಶುಭ ಹಾರೈಸಿ ಆಶೀರ್ವದಿಸಲಾಯಿತು.**

ಈ ಕಾರ್ಯಕ್ರಮದಲ್ಲಿ ಮಾಜಿ ಸಚಿವರು ಹಾಗೂ ಕೆ.ಓ.ಎಫ್. ರಾಜ್ಯಾಧ್ಯಕ್ಷರಾದ ವೆಂಕಟ–ರಾವ್ ನಾಡಗೌಡ ಮಾತನಾಡಿ ವೃದ್ಧಾಶ್ರಮಗಳು



ಹೆಚ್ಚಾದಂತೆಲ್ಲ ಸಂಸ್ಕಾರದಿಂದ ನಾವೆಲ್ಲರೂ ದೂರವಿದ್ದೇವೆ ಎಂದರ್ಥ ಆದರೆ ನಮ್ಮ ಕಾರುಣ್ಯ ಆಶ್ರಮವು ಸುಮಾರು ವರ್ಷಗಳಿಂದ ನಿಜವಾದ ನೆಲೆ ಇಲ್ಲದ ಅನಾಥ ಜೀವಿಗಳಿಗೆ ದಾನಿಗಳ ಸಹಾಯ ಸಹಕಾರದಿಂದ ಬದುಕು ಕಟ್ಟಿಕೊಟ್ಟು ಸಮಾಜದಲ್ಲಿ ಹೆತ್ತವರನ್ನು ಮಕ್ಕಳು ನೋಡಿಕೊಳ್ಳಲೇಬೇಕು ಎನ್ನುವ ಹಲವಾರು ಅಭಿಯಾನಗಳು ಸಮಾಜ–ಕ್ಕೆ ಉತ್ತಮ ಸಂದೇಶ ನೀಡುತ್ತಿವೆ. ಹರೇಟನೂ–ರಿನ ಬಡಜಂಗಮ ಕುಟುಂಬವು ನಾಡಿನ ಕರುಣೆಯ ಕುಟುಂಬವಾಗಿರುವುದು ನಮ್ಮೆಲ್ಲ–ರಿಗೆ ಸಂತೋಷ ಇಂದು ನನ್ನ ಜನ್ಮದಿನದ ಈ ಶುಭ ಸಮಾರಂಭದಲ್ಲಿ ನಮ್ಮ ಗುರುಗಳಾದ ವೇದಮೂರ್ತಿ ವೀರೇಶ ಯಡಿಯೂರು ಮಠ ಹಾಗೂ ಹರೇಟನೂರಿನ ಆದಿಶಕ್ತಿ ಶ್ರೀ ದ್ಯಾವಮ್ಮ ದೇವಿಯ ಪ್ರಧಾನ ಅರ್ಚಕರು ಕಾರುಣ್ಯ ಆಶ್ರಮದ ಸಂಸ್ಥಾಪಕರಾದ ವೇದಮೂರ್ತಿ ಅಮರಯ್ಯ ಸ್ವಾಮಿಗಳ ಆಶೀರ್ವಾದದೊಂದಿಗೆ ಶಾಂಭವಿ ಶ್ರೀರಕ್ಷೆ ಎನ್ನುವ ಅಭಿದಾನ ಇನ್ನೂ ಹೆಚ್ಚಿನ ಅಂ–



ಧ–ಅನಾಥರ ಸೇವೆ ಮಾಡಲು ಸ್ಫೂರ್ತಿಯಾಗಿದೆ.

ಇಂದಿನ ಈ ಶ್ರೀರಕ್ಷೆಯೂ ಸದಾವಕಾಲ ನನಗೆ ಆಶೀರ್ವದಿಸಲಿ ಎನ್ನುವುದು ನನ್ನ ಆಶಯ ಎಂದು ಮಾತನಾಡಿದರು. ಕಾರ್ಯಕ್ರಮದ ದಿವ್ಯ ಸಾನಿಧ್ಯ ವಹಿಸಿದ್ದ ಶ್ರೀ ಶಾಂಭವಿ ಪುಣ್ಯಾಶ್ರಮದ ಪೀಠಾಧಿಪತಿಗಳಾದ ವೇದಮೂರ್ತಿ ವೀರೇಶ ಯಡಿಯೂರು ಮಠ ಮಾತನಾಡಿ ಸರಳ ಸಾಮಾನ್ಯ ವ್ಯಕ್ತಿತ್ವದ ನಾಡಗೌಡ್ರು ತಮ್ಮ ಅವಧಿಯಲ್ಲಿ ಹಲವಾರು ಅಭಿವೃದ್ಧಿ ಕಾರ್ಯಗಳನ್ನು ಮಾಡಿದ್ದಾರೆ. ಮುಂದಿನ ಇವರ ರಾಜಕೀಯ ಭವಿಷ್ಯ ಇನ್ನು ಉತ್ತಮ ಸ್ಥಾನಮಾನದೊಂದಿಗೆ ಸಮಾಜಕ್ಕೆ ಉತ್ತಮ ಸೇವೆ ಮಾಡಲು ಅವಕಾಶ ನೀಡಲಿ ಎನ್ನುವ ಉದ್ದೇಶದಿಂದ ಶಾಂಭವಿ ಶ್ರೀರಕ್ಷೆ ಎನ್ನುವ ವಿಧಾನದ ಮೂಲಕ ಆಶೀರ್ವದಿಸಿದ್ದೇವೆ.

ನಾಡಗೌಡ್ರು ಕುಟುಂಬಕ್ಕೆ ಉತ್ತಮ ಆಯಸ್ಸು ಆಯುರಾರೋಗ್ಯ ಸುಖ ಶಾಂತಿ ನೆಮ್ಮದಿಯನ್ನು ಶಾಂಭವಿ ನವದುರ್ಗೆಯರು ಕರುಣಿಸಲಿ ಎನ್ನುವ ವಿಶೇಷ ಪ್ರಾರ್ಥನೆ ನಮ್ಮದು ಎಂದು ಆಶೀರ್ವಚನ ನೀಡಿದರು. ಈ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಜೆ.ಡಿ. ಎಸ್. ಮುಖಂಡರುಗಳಾದ.ಸೋಮನಗೌಡ ್ರ. ಜಿ ಸತ್ಯನಾರಾಯಣ. ಅಜಯ್ ನಾಡಗೌಡ. ಶಂಕರಗೌಡ ಮಾಲಿ ಪಾಟೀಲ್ ಸಾಸಲಮರಿ. ಗಿರಿಯಪ್ಪ ನಾಯಕ ಬಾದರ್ಲಿ. ಬಸವರಾಜ ಆಶಿಫ್. ಚನ್ನಬಸವ ಸಿರಗುಂಪಿ. ವೀರ ಬಾಬು. ಮಹಾವೀರ್ ಶೇಟ್. ನಾಗರಾಜ ಕುರುಕುಂದಾ. ಹಾಗೂ ಶ್ರೀಮಠ ಸೇವಾ ಟ್ರಸ್ಟ್ ನ ಸದಸ್ಯರಾದ ಸುಜಾತ ಹಿರೇಮಠ. ?? ಕಾರುಣ್ಯ ಆಶ್ರಮದ ಕಾರ್ಯಾಧ್ಯಕ್ಷರಾದ ಡಾ. ಚನ್ನಬಸವಯ್ಯ ಸ್ವಾಮಿ ಹಿರೇಮಠ. ಆಶ್ರಮದ ಸಿಬ್ಬಂದಿಗಳಾದ ಸುಜಾತ ಮಲದ ಗುಡ್ಡ. ಸಿದ್ದಯ್ಯ ಸ್ವಾಮಿ ಮರಿಯಪ್ಪ ಜ್ಯೋತಿ. ಹಾಗೂ ಅನೇಕ ಜೆಡಿಎಸ್ ಮುಖಂಡರುಗಳು ಮತ್ತು ನಾಡಗೌಡ್ರು ಅಭಿಮಾನಿಗಳು ಉಪಸ್ಥಿತರಿದ್ದರು.

## ಶಿಕ್ಷಣ ಮಾರ್ಗದರ್ಶಿ ವಿಶೇಷ

### M. Pharm ಫಾರ್ಮಾಸ್ಯುಟಿಕಲ್ ಕೆಮಿಸ್ಟ್ರಿ

M. Pharm ಫಾರ್ಮಾಸ್ಯುಟಿಕಲ್ ಕೆಮಿಸ್ಟ್ರಿ ಒಂದು 2 ವರ್ಷಗಳ ಸ್ನಾತಕೋತ್ತರ ಕೋರ್ಸ್ ಆಗಿದ್ದು, ರಸಾಯನಶಾಸ್ತ್ರವನ್ನು ಔಷಧಗಳ ಸಂಶ್ಲೇಷಣೆ, ವಿಶ್ಲೇಷಣೆ ಮತ್ತು ಅಭಿವೃದ್ಧಿಪಡಿಸುವಿಕೆಯೊಂದಿಗೆ ಸಂಯೋಜಿಸುತ್ತದೆ, ಮುಖ್ಯ ವಿಷಯಗಳಲ್ಲಿ ಔಷಧೀಯ ರಸಾಯನಶಾಸ್ತ್ರ, ಸಂಶ್ಲೇಷಣೆ, ವಿಶ್ಲೇಷಣಾತ್ಮಕ ವಿಧಾನಗಳು ಮತ್ತು ಕಂಪ್ಯೂಟೇಶನಲ್ ಕೆಮಿಸ್ಟ್ರಿ ಸೇರಿವೆ; B. Pharm ಪದವಿ (ಕನಿಷ್ಠ 60%) ಅರ್ಹತೆ, ಮತ್ತು ಉತ್ತಮ ಉದ್ಯೋಗಾವಕಾಶಗಳನ್ನು ನೀಡುತ್ತದೆ. ಅವಧಿ: 2 ವರ್ಷಗಳು. ಧ್ಯೇಯ: ಹೊಸ ಔಷಧಗಳನ್ನು ವಿನ್ಯಾಸಗೊಳಿಸಲು ಮತ್ತು ಅಭಿವೃದ್ಧಿಪಡಿಸಲು ರಾಸಾಯನಿಕ ತತ್ವಗಳನ್ನು ತಿಳಿಸುವುದು. ಮುಖ್ಯ ವಿಷಯಗಳು (Key Subjects): ಔಷಧೀಯ ರಸಾಯನಶಾಸ್ತ್ರ (Pharmaceutical Chemistry): ಔಷಧಗಳ ರಚನೆ ಮತ್ತು ಕಾರ್ಯಗಳನ್ನು ಅಧ್ಯಯನ ಮಾಡುವುದು. ಸಾವಯವ ರಸಾಯನಶಾಸ್ತ್ರ (Organic Chemistry): ಸಂಕೀರ್ಣ ಔಷಧೀಯ ಅಣುಗಳ ಸಂಶ್ಲೇಷಣೆ. ಔಷಧೀಯ ವಿಶ್ಲೇಷಣೆ (Pharmaceutical Analysis): ಔಷಧಗಳ ಶುದ್ಧತೆ ಮತ್ತು ಗುಣಮಟ್ಟವನ್ನು ಪರೀಕ್ಷಿಸುವುದು. ಕಂಪ್ಯೂಟೇಶನಲ್ ಕೆಮಿಸ್ಟ್ರಿ (Computational Chemistry): ಕಂಪ್ಯೂಟರ್‌ಗಳನ್ನು ಬಳಸಿ ಔಷಧಗಳ ವಿನ್ಯಾಸ. ಫೈಟೊಕೆಮಿಸ್ಟ್ರಿ (Phytochemistry): ಸಸ್ಯಗಳಿಂದ ಔಷಧೀಯ ಸಂಯುಕ್ತಗಳ ಅಧ್ಯಯನ. ಅರ್ಹತೆ (Eligibility): ವಿಶ್ವವಿದ್ಯಾಲಯದಿಂದ ಮಾನ್ಯತೆ ಪಡೆದ ಕಾಲೇಜಿನಲ್ಲಿ B. Pharm ಪದವಿ. B. Pharm ನಲ್ಲಿ ಕನಿಷ್ಠ 60% ಅಂಕಗಳು. ಉಕಂಖ ಸ್ಕೋರ್ ಪ್ರವೇಶಕ್ಕೆ ಸಹಾಯ ಮಾಡುತ್ತದೆ. ಉದ್ಯೋಗಾವಕಾಶಗಳು (Career Opportunities): ಫಾರ್ಮಾಸ್ಯುಟಿಕಲ್ ಕಂಪನಿಗಳ R&D ವಿಭಾಗಗಳು. ಉತ್ಪಾದನಾ ವಿಭಾಗಗಳು (Production). ಗುಣಮಟ್ಟ ನಿಯಂತ್ರಣ (Quality Control). ನಿಯಂತ್ರಕ ವ್ಯವಹಾರಗಳು (Regulatory Affairs). ಡ್ರಗ್ ಇನ್ಸ್‌ಪೆಕ್ಟರ್, ಮೆಡಿಕಲ್ ರೈಟರ್ ಮುಂತಾದ ಹುದ್ದೆಗಳು. ಈ ಕಾರ್ಯಕ್ರಮವು ಆಧುನಿಕ ವಿಶ್ಲೇಷಣಾತ್ಮಕ ಉಪಕರಣಗಳು ಮತ್ತು ತಂತ್ರಗಳಿಗೆ ವಿಶೇಷ ಒತ್ತು ನೀಡುವ ಮೂಲಕ ಔಷಧ ರಸಾಯನಶಾಸ್ತ್ರದಲ್ಲಿ ಸೈದ್ಧಾಂತಿಕ ಜ್ಞಾನ ಮತ್ತು ಪ್ರಾಯೋಗಿಕ ಕೌಶಲ್ಯಗಳನ್ನು ನೀಡುತ್ತದೆ. ಪಠ್ಯಕ್ರಮವು ಕಿಖಂಖ, ಕಂಪ್ಯೂಟರ್ ನೆರವಿನ ಔಷಧ ವಿನ್ಯಾಸ ಮತ್ತು ನಿರ್ದಿಷ್ಟ ಸ್ಥಳಗಳಲ್ಲಿ ಕಾರ್ಯನಿರ್ವಹಿಸಲು ಗುರಿಯಾಗಿಟ್ಟುಕೊಂಡು ಔಷಧಗಳ ವಿನ್ಯಾಸದಲ್ಲಿ ಸಾಕಷ್ಟು ಸೈದ್ಧಾಂತಿಕ ಜ್ಞಾನ ಮತ್ತು ಪ್ರಾಯೋಗಿಕ ಕೌಶಲ್ಯಗಳನ್ನು ಒದಗಿಸುತ್ತದೆ. ಇದು ಔಷಧೀಯ ಆಸಕ್ತಿಯ ನೈಸರ್ಗಿಕ ಉತ್ಪನ್ನಗಳ ರಚನೆಯ ಸ್ಪಷ್ಟೀಕರಣ ಮತ್ತು ಚಿಕಿತ್ಸೆಯಲ್ಲಿ ಬಳಸಲಾಗುವ ವಿವಿಧ ವರ್ಗಗಳ ಔಷಧಗಳ ಸಂಶ್ಲೇಷಣೆಯಲ್ಲಿ ಒಳಗೊಂಡಿರುವ ವಿಭಿನ್ನ ಪ್ರತಿಕ್ರಿಯೆಗಳ ಕಾರ್ಯವಿಧಾನದ ಪರಿಕಲ್ಪನೆಗಳನ್ನು ಸಹ ಒಳಗೊಂಡಿದೆ. ಜೈವಿಕ, ಭೌತ ರಾಸಾಯನಿಕ ಮತ್ತು ಔಷಧೀಯ ವಿಧಾನಗಳ ಆಧಾರದ ಮೇಲೆ ಔಷಧ ವಿತರಣಾ ವ್ಯವಸ್ಥೆಯ ಅಭಿವೃದ್ಧಿಯ ಪರಿಕಲ್ಪನೆಗಳನ್ನು ಸಹ ವಿದ್ಯಾರ್ಥಿಗಳು ಕಲಿಯುತ್ತಾರೆ. ಸಾವಯವ ಸಂಶ್ಲೇಷಣೆಯ ವಿಭಿನ್ನ ತಂತ್ರಗಳು, ಕಾರ್ಯವಿಧಾನಗಳು ಮತ್ತು ರಸಾಯನಶಾಸ್ತ್ರ ಮತ್ತು ಔಷಧ ಅನ್ವೇಷಣೆಯನ್ನು ಪ್ರಕ್ರಿಯೆಗೊಳಿಸಲು ಅವುಗಳ ಅನ್ವಯವು ಸಹ ಕೋರ್ಸ್‌ನ ಒಂದು ಭಾಗವಾಗಿದೆ. ಪಠ್ಯಕ್ರಮ ಮತ್ತು ಪಠ್ಯಕ್ರಮವನ್ನು ದೇಶದಲ್ಲಿ ಔಷಧಾಲಯ ವೃತ್ತಿಯನ್ನು ನಿಯಂತ್ರಿಸುವ ಶಾಸನಬದ್ಧ ಸಂಸ್ಥೆಯಾದ ಫಾರ್ಮಸಿ ಕೌನ್ಸಿಲ್ ಆಫ್ ಇಂಡಿಯಾ (PCI) ಪ್ರಕಾರ ಮಾರ್ಗದರ್ಶನ ಮಾಡಲಾಗುತ್ತದೆ.

## ರಾಯಚೂರು ಉತ್ಸವ ಎಲ್ಲ ಸಂಘಟನೆಗಳ ಪದಾಧಿಕಾರಿಗಳ ಸಭೆ ಜನವರಿ 8ಕ್ಕೆ

ನೈಜ್ಯ ದೆಸೆ ನ್ಯೂಸ್

**ರಾಯಚೂರು: ಜನವರಿ 05 (ಕರ್ನಾಟಕ ವಾರ್ತೆ): ರಾಯಚೂರು ಜಿಲ್ಲೆಯಲ್ಲಿ ಜನವರಿ 29, 30 ಹಾಗೂ 31ರಂದು ಎಡೆದೊರೆ ನಾಡು ರಾಯಚೂರು ಉತ್ಸವ-2026 ಹಮ್ಮಿಕೊಳ್ಳಲಾಗಿದ್ದು, ಈ ಉತ್ಸವದ ಸಿದ್ಧತೆಗಾಗಿ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಜನವರಿ 8ರಂದು ಬೆಳಗ್ಗೆ 11 ಗಂಟೆಗೆ ಜಿಲ್ಲಾ ಪಂಚಾಯತ್ ಕಾರ್ಯಾಲಯದ ಸಭಾಂಗಣದಲ್ಲಿ ಪೂರ್ವಭಾವಿ ಸಭೆಯನ್ನು ಏರ್ಪಡಿಸಲಾಗಿದೆ.**

ಈ ಸಭೆಗೆ ರಾಯಚೂರು ಜಿಲ್ಲೆಯಲ್ಲಿನ ವಿವಿಧ ಎಲ್ಲ ಸಂಘಟನೆಗಳ ಹಾಗೂ ಸಮಿತಿಗಳ ಅಧ್ಯಕ್ಷರು ಮತ್ತು ಪದಾಧಿಕಾರಿಗಳು ಹಾಜರಾಗಲು ಅಪರ ಜಿಲ್ಲಾಧಿಕಾರಿಗಳು ಮನವಿ ಮಾಡಿದ್ದಾರೆ.

## ಜನವರಿ 7ರಂದು ನಾನಾ ಜಯಂತಿಗಳ ಪೂರ್ವಭಾವಿ ಸಭೆ

ನೈಜ್ಯ ದೆಸೆ ನ್ಯೂಸ್

**ರಾಯಚೂರು: ಜನವರಿ 05 (ಕರ್ನಾಟಕ ವಾರ್ತೆ): ನಗರದ ನೂತನ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜನವರಿ 7ರಂದು ಬೆಳಗ್ಗೆ 11 ಗಂಟೆಗೆ ಶಿವಯೋಗಿ ಸಿದ್ಧರಾಮ ಜಯಂತಿ ಆಚರಣೆಯ ಪೂರ್ವಭಾವಿ ಸಭೆ,**

ಅಂದು ಬೆಳಗ್ಗೆ 11.30ಕ್ಕೆ ಮಹಾಯೋಗಿ ವೇಮನ ಜಯಂತಿ ಆಚರಣೆಯ ಪೂರ್ವಭಾವಿ ಸಿದ್ಧತಾ ಸಭೆ ಮತ್ತು ಮಧ್ಯಾಹ್ನ 12 ಗಂಟೆಗೆ ಅಂಬಿಗರ ಚೌಡಯ್ಯ ಜಯಂತಿ ನಿಮಿತ್ತ ಪೂರ್ವಭಾವಿ ಸಿದ್ಧತಾ ಸಭೆ ನಡೆಯಲಿದ್ದು ಆಯಾ ಜಯಂತಿ ಆಚರಣೆಯ ಸಮಿತಿಯ ಅಧ್ಯಕ್ಷರು ಮತ್ತು ಪದಾಧಿಕಾರಿಗಳು, ನಗರದ ಎಲ್ಲಾ ಸಂಘ ಸಂಸ್ಥೆಗಳ ಪ್ರಮುಖರು, ನಾಗರಿಕರು, ಅಧಿಕಾರಿಗಳು ಮತ್ತು ಸಿಬ್ಬಂದಿ ಪೂರ್ವಭಾವಿ ಸಭೆಗೆ ಹಾಜರಾಗಬೇಕು ಎಂದು ಅಪರ ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ರಾಜ್ಯದಲ್ಲಿ ಮುಂದುವರೆದ ಶುಷ್ಕ ವಾತಾವರಣ



ನೈಜ್ಯ ದೆಸೆ ನ್ಯೂಸ್

**ಜನವರಿ 05: ಕಳೆದ ಕೆಲ ದಿನಗಳಿಂದ ರಾಜ್ಯದ ಕೆಲವೆಡೆ ತುಂತುರು ಮಳೆ, ಇನ್ನೂ ಕೆಲವೆಡೆ ಒಣಹವೆಯ (Weather Forecast) ವಾತಾವರಣ ಮನೆಮಾಡಿದೆ. ಬೆಂಗಳೂರಿನಲ್ಲಿ ಹಲವು ದಿನಗಳಿಂದ ಮಂಜು ಮುಸುಕಿದ ಹವಾಮಾನ ಕಂಡುಬರುತ್ತಿದೆ. ದಕ್ಷಿಣ ಒಳನಾಡು ಸೇರಿದಂತೆ ಕರಾವಳಿ ಮತ್ತು ಉತ್ತರ ಒಳನಾಡಿನ ಜಿಲ್ಲೆಗಳಲ್ಲಿಯೂ ನಿನ್ನೆಯಂತೆಯೇ ಇಂದೂ ಒಣ ಹವೆ ಮುಂದುವರಿಯಲಿದೆ ಎಂದು ಇಲಾಖೆ ಮುನ್ಸೂಚನೆ ನೀಡಿದೆ.**

ದಕ್ಷಿಣ ಒಳನಾಡಿನ ಬಳ್ಳಾರಿ, ಬೆಂಗಳೂರು ಗ್ರಾಮಾಂತರ, ಬೆಂಗಳೂರು ನಗರ, ಚಿಕ್ಕಬಳ್ಳಾಪುರ, ಚಿತ್ರದುರ್ಗ, ದಾವಣಗೆರೆ, ಕೋಲಾರ, ಮಂಡ್ಯ, ರಾಮನಗರ, ಚಿಕ್ಕಮಗಳೂರು, ಶಿವಮೊಗ್ಗ, ಹಾಸನ, ಕೊಡಗು, ಚಾಮರಾಜನಗರ, ಮೈಸೂರು, ತುಮಕೂರು ಮತ್ತು ವಿಜಯನಗರ ಜಿಲ್ಲೆಗಳಲ್ಲಿಯೂ ಒಣ ಹವೆಯ ವಾತಾವರಣ ಇರಲಿದೆ. ಕರಾವಳಿಯ ಜಿಲ್ಲೆಗಳಾದ ಉಡುಪಿ, ದಕ್ಷಿಣ ಕನ್ನಡ ಮತ್ತು ಉತ್ತರ ಕನ್ನಡ ಜಿಲ್ಲೆಗಳಲ್ಲಿ ಒಣ ಹವೆಯಿರಲಿದೆ ಎಂದು ಇಲಾಖೆ ತಿಳಿಸಿದೆ. ಉತ್ತರ ಒಳನಾಡು ಭಾಗದ ಜಿಲ್ಲೆಗಳಾದ ಬೆಳಗಾವಿ, ಬೀದರ್, ವಿಜಯಪುರ, ಬಾಗಲಕೋಟೆ, ಹಾವೇರಿ, ಗದಗ, ಧಾರವಾಡ, ಕಲಬುರಗಿ, ಕೊಪ್ಪಳ, ಬಳ್ಳಾರಿ, ರಾಯಚೂರು, ಯಾದಗಿರಿ ಮತ್ತು ವಿಜಯನಗರದಲ್ಲಿ ಕಳೆದ ಹಲವು ದಿನಗಳಿಂದ ಒಣಹವೆಯ ವಾತಾವರಣವಿದ್ದು, ಇಂದೂ ಮುಂದುವರಿಯಲಿದೆ ಎಂದು ಹವಾಮಾನ ಇಲಾಖೆ ತಿಳಿಸಿದೆ. ಬೆಂಗಳೂರಿನಲ್ಲಿ ಬೆಂಗಳೂರಿನಲ್ಲಿ ಇಂದು ಮಂಜು ಕವಿದ ವಾತಾವರಣವಿದ್ದು, ತಾಪಮಾನ ಕನಿಷ್ಠ 16ಲಿಅ ಇದ್ದು, ಗರಿಷ್ಠ 28ಲಿಅ ಇರಲಿದೆ ಎಂದು ಇಲಾಖೆ ತಿಳಿಸಿದೆ. ಈ ರೀತಿಯ ತೀವ್ರ ಚಳಿಯಿಂದ ಜನರ ಆರೋಗ್ಯದಲ್ಲಿ ಏರುಪೇರಾಗುತ್ತಿದ್ದು, ಬೆಚ್ಚಗಿನ ಹೊದಿಕೆ ಹೊತ್ತುಕೊಳ್ಳಬೇಕು ಹಾಗೂ ಬಿಸಿ ಆಹಾರ ಸೇವನೆ ಮಾಡಬೇಕೆಂದು ವೈದ್ಯರು ಸೂಚಿಸಿದ್ದಾರೆ.

# ಭಕ್ತರ ಭಕ್ತಿ ಸಾಗರ ಅಂಬಾಮಠ



**ಕರ್ನಾಟಕ ರಾಜ್ಯದ ರಾಯಚೂರು ಜಿಲ್ಲೆಯ ಸಿಂಧನೂರು ತಾಲೂಕಿನಲ್ಲಿರುವ ಅಂಬಾಮಠ ನಮ್ಮ ರಾಜ್ಯ ಅಷ್ಟೇ ಅಲ್ಲ ಬೇರೆ ಬೇರೆ ರಾಜ್ಯಗಳಿಂದಲೂ ಲಕ್ಷಾಂತರ ಭಕ್ತರನ್ನ ಸೆಳೆಯುತ್ತಿದ್ದು ಬಹು ವಿಜೃಂಭಣೆಯಿಂದ ಜಾತ್ರೆಯು ನಡೆಯುತ್ತಿದೆ.**

ಐತಿಹಾಸಿಕ ಹಿನ್ನೆಲೆ: ತಾಲೂಕಿನ ಪ್ರಸಿದ್ಧ ಪ್ರವಾಸಿ ತಾಣವಾದ ಸುಕ್ಷೇತ್ರ ಸಿದ್ಧಪರ್ವತ ಅಂಬಾಮಠದಲ್ಲಿನ ಅಂಬಾದೇವಿ ದೇವಸ್ಥಾನಕ್ಕೆ 343ವರ್ಷಗಳ ಇತಿಹಾಸವಿದೆ. ಕರ್ನಾಟಕ ಸೇರಿದಂತೆ ಆಂಧ್ರಪ್ರದೇಶ, ಮಹಾರಾಷ್ಟ್ರ ರಾಜ್ಯಗಳು ಹಾಗೂ ನಾನಾ ಕಡೆಯಿಂದ ಲಕ್ಷಾಂತರ ಭಕ್ತರು ಇಲ್ಲಿಗೆ ಆಗಮಿಸುತ್ತಾರೆ. ಗುಡ್ಡ-ಗಾಡು ದಟ್ಟ ಅರಣ್ಯ ಪ್ರದೇಶವಾಗಿದ್ದ ಅಂಬಾಮಠ ಬೆಳೆದು ಬಂದಿದ್ದಕ್ಕೆ ದೊಡ್ಡ ಇತಿಹಾಸವಿದೆ. 1876ರಲ್ಲಿ ಆದೋನಿ ಜಿಲ್ಲೆಯ ಹಿರೇಹರಿವಾಣದಲ್ಲಿ ಜನಿಸಿದ್ದ ಚಿದಾನಂದ ಅವಧೂತರು ಬಾಲ್ಯದಲ್ಲಿಯೇ ದೇವಿಯ ದರ್ಶನ ಪಡೆಯುತ್ತಾ ಸಾಮಾನ್ಯ ಪಂಚಾಂಗ ಹೇಳುವ ಕುಟುಂಬದಲ್ಲಿ ಜನಿಸಿದ್ದ ಅವಧೂತರಿಗೆ ಬಡತನ ಕಾಡುತ್ತದೆ.

ಊರ ಹೊರಗೆ ಆ ಊರಿನ ಗೌಡ ಕಟ್ಟಿಸಿದ್ದ ಮನೆಯಲ್ಲಿ ಪಿಶಾಚಿ ಇದೆ ಎಂದು ಮನೆ ತ್ಯಜಿಸಿರುತ್ತಾರೆ. ಆ ಮನೆಯಲ್ಲಿ ಅವಧೂತರು ತಂದೆ, ತಾಯಿಯೊಂದಿಗೆ ವಾಸ ಮಾಡುತ್ತಾರೆ. ಮನೆಯ ಇಷ್ಟ ದೈವ ವೀರನಾರಾಯಣನಿಗೆ ಪೂಜೆ ಸಲ್ಲಿಸಲು ತಂದೆ ಹೋಗುವಾಗ ಕರಿಗೆಡಬು, ತುಪ್ಪ ಮತ್ತು ಇತರ ನೈವೇದ್ಯದ ಅಡುಗೆ ಮುಟ್ಟಬಾರದು ಎಂದು ಚಿದಾನಂದ ಅವಧೂತರನ್ನು ಕಂಬಕ್ಕೆ ಕಟ್ಟಿ ಹಾಕಿ ಹೋಗಿರುತ್ತಾರೆ. ಈ ವೇಳೆ ತಾಯಿಯ ರೂಪದಲ್ಲಿ ಪ್ರತ್ಯಕ್ಷಳಾದ ಅಂಬಾದೇವಿ ಅವಧೂತರನ್ನು ಬಂಧನದಿಂದ ಬಿಚ್ಚಿ ಊಟ ಮಾಡಿಸುತ್ತಾಳೆ. ನೀರು ತರುವೆ ಎಂದು ಹೊರ ಹೋಗುತ್ತಾಳೆ. ಮನೆಯವರು ಬಂದಾಗ ಊಟ ಮಾಡುವುದನ್ನು ಕಂಡು ಗಾಬರಿಯಾಗುತ್ತಾರೆ. ದೇವರಿಗೆ ಎಡೆ ಮಾಡುವ ಮುನ್ನ ಊಟ ಮಾಡಿದ್ದಕ್ಕೆ ಬಾಲ ಚಿದಾನಂದರಿಗೆ ಬೈಯ್ಯುತ್ತಾರೆ.

ಆದರೆ ನೀನೇ ನನಗೆ ಊಟ ನೀಡಿದ್ದು, ಬೇಕಿದ್ದರೆ ತುಪ್ಪದಲ್ಲಿ ನಿನ್ನ ಬೆರಳು ಮೂಡಿದ್ದನ್ನು ನೋಡು ಎಂದು ಅಳುತ್ತಾನೆ. ಇದು ದೇವಿ ಮಹಿಮೆ ಇದೆ ಎಂದು ಆ ಬಾಲಕನಿಗೆ ಹೊಡೆಯುವುದನ್ನೇ ಬಿಡುತ್ತಾರೆ. ಅಲ್ಲಿಂದ ಗಂಗಾವತಿ ತಾಲೂಕಿನ ಹೆಬ್ಬಾಳಕ್ಕೆ ಕೂಲಿ ಮಾಡಲು ಕುಟುಂಬ ಸಮೇತ ಬರುತ್ತಾರೆ. ಆಗ ತುಂಗಭದ್ರಾ ನದಿ ದಂಡೆಯಲ್ಲಿನ ಹೊನ್ನಪ್ಪ ಎನ್ನುವ ವಿದ್ವಾಂಸರ ಬಳಿ ಈತನಿಗೆ ವಿದ್ಯೆ ಕಲಿಕೆಗೆ ಬಿಡುತ್ತಾರೆ. ವಿದ್ಯೆ ಕಲಿತ ಬಳಿಕ ಸಿಂಧನೂರು ತಾಲೂಕಿನ ರವುಡಕುಂದಾ ಬಳಿಯ ರಂಗನಾಥ ದೇವಸ್ಥಾನಕ್ಕೆ ಬಂದು ಗವಿಯೊಳಗೆ 9 ದಿನ ದ್ಯಾನ ಮಾಡುತ್ತಾರೆ. ಇಲ್ಲೂ ಮನಸ್ಸು ಪ್ರಶಾಂತವಾಗದ ಕಾರಣ ಕಾಡು ಅರಣ್ಯವಾಗಿದ್ದ ಸೋಮಲಾಪುರ ಗುಡ್ಡಕ್ಕೆ ಬಂದು ಗವಿಯೊಳಗೆ ತಪಸ್ಸು ಮಾಡುತ್ತಾರೆ.

ದೇವಿ ಆರಾಧನೆ ಮಾಡುತ್ತ ಬಹು ದಿನ ಕಾಲ ಕಳೆದಾಗ ದೇವಿ ಪ್ರತ್ಯಕ್ಷಳಾಗಿ ಬೇಡಿಕೆ ಆಲಿಸುತ್ತಾಳೆ. "ಈ ಭಾಗದಲ್ಲಿ ಆರಾಧ್ಯ ದೈವವಾಗಿ ಬೇಡಿದ್ದವರಿಗೆ ವರವ ನೀಡುವ ಮಹಿಮಾ ಪುರುಷಳಾಗಬೇಕು" ಎಂದು ಕೋರಿಕೊಳ್ಳುತ್ತಾನೆ. ಆದರೆ ತನಗೇನೂ ಬೇಡದ ಚಿದಾನಂದ ಯತಿಗಳ ಬೇಡಿಕೆ ಮೇರೆಗೆ ಅಂಬಾದೇವಿ ಮೂರ್ತಿ ಉದ್ಭವವಾಗುತ್ತದೆ. ನೂರಾರು ಜನರು ಕೈ ಮುಗಿಯುತ್ತಾ ಪೂಜೆ-ಪುನಸ್ಕಾರ ಮಾಡುತ್ತಾರೆ. ಕ್ರಮೇಣವಾಗಿ ಅರಣ್ಯ ಪ್ರದೇಶದಲ್ಲಿದ್ದ ದೇವಸ್ಥಾನ ದೊಡ್ಡದಾಗುತ್ತದೆ. ಅಂಬಾಮಠವಾಗಿ ಬೆಳೆಯುತ್ತದೆ. ಇಂತಹ ಮಠ ಈಗ ಲಕ್ಷಾಂತರ ಭಕ್ತರ ತಾಣವಾಗಿದೆ. ಪ್ರತಿ ವರ್ಷ ದಸರಾ ವೇಳೆ ಶರನ್ನವರಾತ್ರಿ ಉತ್ಸವ ನಡೆದರೆ, ಬನದ ಹುಣ್ಣಿಮೆಯಂದು ದೇವಿ ಜಾತ್ರೆ ಅದ್ದೂರಿಯಾಗಿ ನಡೆಯುತ್ತದೆ. ಪ್ರತಿ ಅಮಾವಾಸ್ಯೆ, ಹುಣ್ಣಿಮೆಗೆ ವಿಶೇಷ ಪೂಜೆ, ಮಂಗಳವಾರ, ಶುಕ್ರವಾರ ದೇವಿ ಸನ್ನಿಧಾನದಲ್ಲಿ ಸಾವಿರಾರು ಭಕ್ತರು ದರ್ಶನ ಪಡೆಯುತ್ತಾರೆ.

"ಭಕ್ತರ ಭಕ್ತಿ ಸಾಗರ ಅಂಬಾ ಮಠ": ಅಂಬಾ ಮಠ ಹೀಗೆ ತನ್ನದೇ ಆದ ಇತಿಹಾಸವನ್ನು ಹೊಂದಿ ಅಂದಿನಿಂದ ಇಂದಿನವರೆಗೂ ಬೇರೆ ಬೇರೆ ರಾಜ್ಯಗಳಿಂದಲೂ ಲಕ್ಷಾಂತರ ಭಕ್ತರು ಆಗಮಿಸುತ್ತಾರೆ ಜಾತಿ, ಮತ ಎನ್ನದೆ ಬೇಧ ಭಾವವಿಲ್ಲದೆ ಸರ್ವರು ಸಮಾನವಾಗಿ ಭಾವೈಕ್ಯತೆಯ ಪ್ರತೀಕವಾಗಿ, ಸಂಸ್ಕೃತಿಯ ಪ್ರತೀಕವಾಗಿ ಅಂಬಾದೇವಿ ಜಾತ್ರೆಯು ನಡೆಯುತ್ತದೆ. ಆದ-ರಿಂದ ಹಲವಾರು ಭಕ್ತರನ್ನ ಸೆಳೆದು ಭಕ್ತರ ಭಕ್ತಿಯು ಸಾಗರದಷ್ಟು ಬೆಳೆದು "ಭಕ್ತರ ಭಕ್ತಿ ಸಾಗರ"ವಾಗಿದೆ ಅಂಬಾ ಮಠ.



ಸುಭಾಸ ಹರ್ವಾಪೂರ ಉಪನ್ಯಾಸಕರು ಹಾಗೂ ಪತ್ರಕರ್ತರು ಸಿಂಧನೂರು.

# ಗುಂಡು ಹಾರಿಸಿ ನಿಮ್ಮದೇ ಪಕ್ಷದ ಕಾರ್ಯಕರ್ತನ ಬಲಿ ಪಡೆದ ಶಾಸಕನ ಉಚ್ಚಾಟಿಸುವ ತಾಕತ್ತಿದೆಯೇ



ನೈಜ್ಯ ದೆಸೆ ನ್ಯೂಸ್

**ಬೆಂಗಳೂರು: ಬೆಂಗಳೂರು: ಗುಂಡು ಹಾರಿಸಿ ತಮ್ಮದೇ ಪಕ್ಷದ ಕಾರ್ಯಕರ್ತನನ್ನು ಬಲಿ ಪಡೆದ ಶಾಸಕನನ್ನು ಉಚ್ಚಾಟಿಸುವ ತಾಕತ್ತು ನಿಮ್ಮ ಪಕ್ಷಕ್ಕಿದೆಯೇ? ಎಂದು ಕಾಂಗ್ರೆಸ್'ಗೆ ಬಿಜೆಪಿ ಪ್ರಶ್ನೆ ಮಾಡಿದೆ.**

ಬಳ್ಳಾರಿ ಗಲಭೆ ಪ್ರಕರಣ ಸಂಬಂಧ ರಾಜ್ಯ ಸರ್ಕಾರದ ವಿರುದ್ಧ ಬಿಜೆಪಿ ಕಿಡಿಕಾರಿದೆ. ಗಲಭೆ ನಡೆಸಿದ್ದು ಕಾಂಗ್ರೆಸ್ ಶಾಸಕ, ಗುಂಡು ಹಾರಿಸಿದ್ದೂ ಕಾಂಗ್ರೆಸ್ ಗೂಂಡಾಗಳ ಕಡೆಯವರು, ಬಿಜೆಪಿ ಶಾಸಕರನ್ನು ಹತ್ಯೆ ಮಾಡಲು ಪ್ರಚೋದಿಸಿದ್ದೂ ಕಾಂಗ್ರೆಸ್ ಶಾಸಕ. ಆದರೆ, ಅಮಾನತಿನ ಶಿಕ್ಷೆ ಮಾತ್ರ ಸರ್ಕಾರಿ ಅಧಿಕಾರಿಗೆ ಎಂದು ಕಿಡಿಕಾರಿದೆ.

ಪೂರ್ವನಿಯೋಜಿತ, ಸರ್ಕಾರಿ ಪ್ರಾಯೋಜಿತ ಮತ್ತು ಆಡಳಿತ ಯಂತ್ರವೇ ನೇರವಾಗಿ ಭಾಗಿಯಾದ ಪ್ರಕರಣಕ್ಕೆ ಆಗಷ್ಟೇ ಅಧಿಕಾರ ಸ್ವೀಕರಿಸಿದ ಸರ್ಕಾರಿ ಅಧಿಕಾರಿಯನ್ನು ಸಿದ್ದಾರಾಮಯ್ಯ ಸರ್ಕಾರ ಅಮಾನತುಗೊಳಿಸಿದ್ದೇಕೆ? ಎಂದು ಪ್ರಶ್ನಿಸಿದೆ. ಗುಂಡು ಹಾರಿಸಿ ತಮ್ಮದೇ ಪಕ್ಷದ ಕಾರ್ಯಕರ್ತನನ್ನು ಬಲಿ ಪಡೆದ ಶಾಸಕನನ್ನು ಉಚ್ಚಾಟಿಸುವ ತಾಕತ್ತು ಕಾಂಗ್ರೆಸ್ ಪಕ್ಷಕ್ಕಿದೆಯೇ? ಎಂದೂ ಪ್ರಶ್ನಿಸಿದೆ.

ಈ ನಡುವೆ ಮಾಜಿ ಸಚಿವ ಮತ್ತು ಶಾಸಕ ಜಿ. ಜನಾರ್ಧನ ರೆಡ್ಡಿ ಅವರ ಬಳ್ಳಾರಿಯ ನಿವಾಸಕ್ಕೆ ಬಿಜೆಪಿ ರಾಜ್ಯಾಧ್ಯಕ್ಷ ಮತ್ತು ಶಾಸಕ ಬಿ.ವೈ. ವಿಜಯೇಂದ್ರ ಅವರು ಭೇಟಿ ನೀಡಿ, ಕೆಲಕಾಲ ಮಾತುಕತೆ ನಡೆಸಿದರು.

ಬಳಿಕ ಮಾತನಾಡಿದಅವರು, ಜನಾರ್ದನ ರೆಡ್ಡಿ ಅವರ ಮನೆ ನುಚ್ಚು ನೂರು ಮಾಡುತ್ತೇನೆ; ಪುಡಿಪುಡಿ ಮಾಡುತ್ತೇನೆ. ಭಸ್ಮ ಮಾಡುತ್ತೇನೆ; ಮುಗಿಸಿಬಿಡುವೆ ಎಂಬ ಧಾಟಿಯಲ್ಲಿ ಕೈ ಶಾಸಕ ಮಾತನಾಡಿದ್ದಾರೆ ಎಂದು ಆರೋಪಿಸಿದ ಅವರು, ಕಾಂಗ್ರೆಸ್ ಸರ್ಕಾರಕ್ಕೆ ನಾಡಿನ ನೆಲದ ಕಾನೂನಿನ ಬಗ್ಗೆ ಗೌರವ ಇದ್ದರೆ, ಮೊದಲು ನಿಮ್ಮ ಶಾಸಕನನ್ನು ಒದ್ದು ಒಳಗೆ ಹಾಕಿ ಎಂದು ಆಗ್ರಹಿಸಿದರು. ಈ ರೀತಿ ಗೂಂಡಾಗಿರಿ ನಡೆಯುವುದಿಲ್ಲ ಎಂದು ಅವರಿಗೂ ಅರ್ಥ ಆಗಬೇಕು. ಮಹರ್ಷಿ ವಾಲ್ಮೀಕಿಯವರಿಗೆ ಯಾವ ರೀತಿ ಗೌರವ ಕೊಡಬೇಕೆಂಬ ಸೌಜನ್ಯ ಇವರಿಗೆ ಇಲ್ಲ. ಒಳ್ಳೆಯ ವಾತಾವರಣ ಹಾಳು ಮಾಡುವ ದುಸ್ಸಾಹಸಕ್ಕೆ ಕೈ ಹಾಕಿದ್ದು ಇದನ್ನು ಬಿಜೆಪಿ ಬಲವಾಗಿ ಖಂಡಿಸುತ್ತದೆ ಎಂದು ತಿಳಿಸಿದರು.

# ಪ್ರತಿಭೆ ಗುರುತಿಸುವ ಸೂಕ್ತ ವೇದಿಕೆ ಮಕ್ಕಳ ವ್ಯಕ್ತಿತ್ವ ವಿಕಾಸನದ ವೇದಿಕೆ ಪ್ರತಿಭಾ ಕಾರಂಜಿ :ಕರೆಮ್ಮ ನಾಯಕ

ನೈಜ್ಯ ದೆಸೆ ನ್ಯೂಸ್



**ದೇವದುರ್ಗ: ಜ.05- ಮಕ್ಕಳ ಸರ್ವತೋಮುಖ ಬೆಳವಣಿಗೆಗೆ ಪ್ರತಿಯೊಂದು ಚಟುವಟಿಕೆಗಳಲ್ಲಿ ಭಾಗವಹಿಸುವುದರ ಜೊತೆಗೆ ಹೊರಹೊಮ್ಮುವ ಪ್ರತಿಭಾ ಕಾರಂಜಿ ಕಾರ್ಯಕ್ರಮ ಸಹಕಾರಿಯಾಗಿದೆ ಎಂದು ಶಾಸಕಿ ಕರಿಯಮ್ಮ ನಾಯಕ್ ಹೇಳಿದರು ಅವರು ಪಟ್ಟಣದ ಡಾನ್ ಬಾಸ್ಕೋ ಶಾಲೆಯಲ್ಲಿ ಸೋಮವಾರ ಶಾಲಾ ಶಿಕ್ಷಣ ಸಾಕ್ಷರತಾ ಇಲಾಖೆ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಾರ್ಯಾಲಯ ದೇವದುರ್ಗ ಸಂಯುಕ್ತಾಶ್ರಯದಲ್ಲಿ ತಾಲೂಕು ಮಟ್ಟದ ಪ್ರತಿಭಾ ಕಾರಂಜಿ ಹಾಗೂ ಕಲಿಕೋತ್ಸವ 2025/26 ನೇ ಸಾಲಿನ ಕಾರ್ಯಕ್ರಮ ಉದ್ಘಾಟಿಸಿ.**

ಮಾತನಾಡುತ್ತಾ ಗ್ರಾಮೀಣ ಭಾಗದ ಮಕ್ಕಳಲ್ಲಿ ಅನೇಕ ಕೌಶಲ್ಯಗಳು ಪಠ್ಯದೊಂದಿದೆ ಪಠ್ಯೇತರ ಚಟುವಟಿಕೆಗಳಲ್ಲಿ ತೊಡಗುವುದರಿಂದ ಕಲೆ ನೃತ್ಯ ನಾಟಕ ಜನಪದ ಕಲೆಗಳಂತಹ ಚಟುವಟಿಕೆಗಳಲ್ಲಿ ಭಾಗವಹಿಸುವುದರಿಂದ ಮಕ್ಕಳಲ್ಲಿ ಆತ್ಮವಿಶ್ವಾಸ ಹೆಚ್ಚುವುದು ವಿದ್ಯಾರ್ಥಿಗಳು ಮುಂದಿನ ಜೀವನ ಭವಿಷ್ಯ ಉಜ್ವಲ ಮಾಡಿಕೊಳ್ಳಬೇಕು. ಮಕ್ಕಳಿಗೆ ಪ್ರಾಥಮಿಕ ಹಂತದ ಕಲಿಕೆಯಲ್ಲಿ ಶಿಸ್ತು ಮತ್ತು ಸಂಸ್ಕಾರ ಕಲಿಯಬೇಕು ನನ್ನ ಅಧಿಕಾರ ಅವಧಿಯಲ್ಲಿ ಶಿಕ್ಷಣ ಕ್ಷೇತ್ರಕ್ಕೆ ಹೆಚ್ಚಿನ ಅನುದಾನ ನೀಡಲಾಗಿದ್ದು ಶಿಕ್ಷಕರ ಸಮಸ್ಯೆ ಹಾಗೂ ಸುಂದರವಾದ ಶಾಲಾ ಕಟ್ಟಡಗಳಿಗೆ ಒತ್ತು ನೀಡುವ ಮೂಲಕ ಮಕ್ಕಳ ಪ್ರತಿಭೆ ಹೊರತರಲಾಗುವುದು ಎಂದು ಅಭಿಪ್ರಾಯ ಪಟ್ಟರು.

ಈ ಸಂದರ್ಭದಲ್ಲಿ ಯರಮರಸ್ ಡಯಟ್ ಕಾಲೇಜಿನ ಉಪ ನಿರ್ದೇಶಕರು, ಚಂದ್ರಶೇಖರ್ ಕ್ಷೇತ್ರ ಶಿಕ್ಷಣಾಧಿಕಾರಿ ಮಲ್ಲಿಕಾರ್ಜುನ, ಸಮನ್ವಯಾಧಿಕಾರಿ ಶಿವರಾಜ್ ಪೂಜಾರಿ ಅರಕೆರೆ ತಾಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ಅನ್ನರಾಜ, ಫಾದರ್ ಟೋನಿ ಹನುಮಂತರಾಯ ಶಾಖೆ ಎಂ ವಿ ಕವಡಿಮಠ ವಿರುಪ್ಪನ ಗೌಡ ನಾಗಡದಿನ್ನಿ,ರಂಗನಾಥ್, ಹೊನ್ನಪ್ಪ, ಮುಖಂಡರಾದ ಸಿದ್ದಣ್ಣ ಗಣೇಕಲ್,ಶರಣೇಗೌಡ ಸುಕೇಶ್ವರ,ಮಂಜುನಾಥ್ ಮಾತಲ್ಲಿ, ಸೇರಿದಂತೆ ಸಿ ಆರ್ ಪಿ ಶಿಕ್ಷಕರು ಮಕ್ಕಳು ಇದ್ದರು.